ಸಂಪುಟ : 11 ಸಂಚಿಕೆ: 93 ಪುಟ : 4+2 ಬೆಲೆ: 3.00 ಬುಧವಾರ ಮೇ 13 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 93 Pages : 4+2 Price : 3.00 Wednesday May 13 22026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಅಂಗನವಾಡಿಗೆ ಉಸ್ತುವಾರಿ ಕಾರ್ಯದರ್ಶಿ ಭೇಟಿ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯ ಹಳ್ಳಿಕೆರೆ ಗ್ರಾಮದ ಅಂಗನವಾಡಿ ಕೇಂದ್ರಕ್ಕೆ ಡಾ. ಎಂ.ವಿ. ವೆಂಕಟೇಶ್ ಭೇಟಿ ನೀಡಿ, ಕೇಂದ್ರದ ಕಾರ್ಯವೈಖರಿ ಹಾಗೂ ಮಕ್ಕಳಿಗೆ ನೀಡಲಾಗುತ್ತಿರುವ ಸೌಲಭ್ಯಗಳ ಕುರಿತು ಸಮಗ್ರ ಪರಿಶೀಲನೆ ನಡೆಸಿದರು.

ಈ ವೇಳೆ ಮಕ್ಕಳಿಗೆ ನೀಡಲಾಗುತ್ತಿರುವ ಪೌಷ್ಟಿಕ ಆಹಾರ, ಕಲಿಕಾ ವಾತಾವರಣ, ಆರೋಗ್ಯ ಸೌಲಭ್ಯಗಳು ಹಾಗೂ ಕೇಂದ್ರದ ಮೂಲಭೂತ ವ್ಯವಸ್ಥೆಗಳ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದರು.

ಪರಿಶೀಲನೆ ಸಂದರ್ಭದಲ್ಲಿ ಸಿ.ಎನ್. ಶ್ರೀಧರ್, ಗಂಗಪ್ಪ ಎಂ, ಸಿ.ಆರ್. ಮುಂಡರಗಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ಹಾಗೂ ಊರಿನ ಹಿರಿಯರು ಉಪಸ್ಥಿತರಿದ್ದರು.

## "ಕಾರ್ಮಿಕ ವಿರೋಧಿ ನೀತಿಗಳನ್ನು ಹಿಂಪಡೆಯಬೇಕು"



■ವಿಜಯಸಾಕ್ಷಿ ಸುದ್ದಿ, ಗದಗ

ಕೇಂದ್ರ ಸರ್ಕಾರ ಕಾರ್ಮಿಕ ಕಾನೂನುಗಳಿಗೆ ತಿದ್ದುಪಡಿ ತಂದು ನಾಲ್ಕು ಕೋಡ್‌ಗಳಾಗಿ ವಿಂಗಡಿಸಿ ಜಾರಿಗೊಳಿಸುತ್ತಿರುವ ನೀತಿಯನ್ನು ವಿರೋಧಿಸಿ ಅಖಿಲ ಭಾರತ ಖಾಸಗಿ ಕೈಗಾರಿಕಾ ಯೂನಿಯನ್ ವತಿಯಿಂದ ಗದಗದ ಮಹಾತ್ಮಾ ಗಾಂಧಿ ಸರ್ಕಲ್ ನಲ್ಲಿ ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನಾಕಾರರು ಕಾರ್ಮಿಕ ಕೋಡ್‌ಗಳ ಪ್ರತಿಗಳನ್ನು ಸುಡುವ ಮೂಲಕ ಕೇಂದ್ರ ಸರ್ಕಾರದ ನೀತಿಗೆ ತೀವ್ರ ವಿರೋಧ ವ್ಯಕ್ತಪಡಿಸಿದರು.

ಹೋರಾಟದಲ್ಲಿ ಮಾಲಿನಿ ಮೆಸ್ತಾ ಹಾಗೂ ಮಹೇಶ ಪತ್ತಾರ ಭಾಗವಹಿಸಿದ್ದರು. ಈ ಸಂದರ್ಭದಲ್ಲಿ ಜಿಲ್ಲಾ ಮುಖಂಡರಾದ ಮಹೇಶ ಹಿರೇಮಠ, ಬಸವರಾಜ ಮಂತೂರ, ರುದ್ರಗೌಡ ಸಂಕನಗೌಡ್ರ, ಮೈಬು ಹವಲ್ದಾರ, ಮುತ್ತಪ್ಪ ಚಲವಾದಿ, ದೇವಪ್ಪ ಕಲ್ಮನಿ, ಬಸವರಾಜ ಮೆವುಂಡಿ, ಶಾರದಾ ರೋಣದ, ಸುಮಾ ಚಲವಾದಿ, ಗೀತಾ ಪಾಟೀಲ, ಅನ್ನಪೂರ್ಣ ಸಾಲಿಮಠ, ಯಶೋಧಾ ಬೆಟಗೇರಿ, ನಾಗರತ್ನ ಬಡಿಗಣ್ಣನವರ ಸೇರಿದಂತೆ ಹಲವರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

### "ಬೀಜ-ಗೊಬ್ಬರ ಪೂರೈಕೆ, ಗ್ಯಾಸ್ ವಿತರಣೆ ಹಾಗೂ ಆರೋಗ್ಯ ಸೇವೆಯಲ್ಲಿ ನಿರ್ಲಕ್ಷ್ಯ ಸಹಿಸುವುದಿಲ್ಲ" - ಡಾ. ಎಂ.ವಿ. ವೆಂಕಟೇಶ್

# ಕುಡಿಯುವ ನೀರಿಗೆ ಮೊದಲ ಆದ್ಯತೆ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಹೆಚ್ಚುತ್ತಿರುವ ಉಷ್ಣಾಂಶದ ಹಿನ್ನೆಲೆಯಲ್ಲಿ ಜನ ಹಾಗೂ ಜಾನುವಾರುಗಳಿಗೆ ಸಮರ್ಪಕ ಕುಡಿಯುವ ನೀರು ಪೂರೈಕೆ ಮಾಡುವುದಕ್ಕೆ ಮೊದಲ ಆದ್ಯತೆ ನೀಡಬೇಕು ಎಂದು ರಾಜ್ಯ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಸರ್ಕಾರದ ಕಾರ್ಯದರ್ಶಿಗಳು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಡಾ. ಎಂ.ವಿ. ವೆಂಕಟೇಶ್ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಮಂಗಳವಾರ ನಡೆದ ಜಿಲ್ಲಾ ಪ್ರಗತಿ ಪರಿಶೀಲನಾ




ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



> "ವಸತಿ ಶಾಲೆಗಳು ಕೇವಲ ಊಟ-ತಿಂಡಿ ನೀಡುವ ಕೇಂದ್ರಗಳಾಗಬಾರದು. ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ದೊರೆಯಬೇಕು. ಅಧಿಕಾರಿಗಳು ಶಾಲೆಗಳಿಗೆ ನಿಯಮಿತ ಭೇಟಿ ನೀಡಿ ಸಮಸ್ಯೆಗಳನ್ನು ಪರಿಹರಿಸಬೇಕು. ನಿರ್ಲಕ್ಷ್ಯ ಕಂಡುಬಂದರೆ ಶಿಸ್ತು ಕ್ರಮ ಅನಿವಾರ್ಯ"
>
> **– ಡಾ. ಎಂ.ವಿ. ವೆಂಕಟೇಶ್**

ಕಳೆದ ವರ್ಷಕ್ಕಿಂತ ಈ ಬಾರಿ ಜಿಲ್ಲೆಯಲ್ಲಿ ಹೆಚ್ಚಿನ ಉಷ್ಣಾಂಶ ದಾಖಲಾಗುತ್ತಿರುವ ಹಿನ್ನೆಲೆಯಲ್ಲಿ ನೀರಿನ ಸಮಸ್ಯೆ ಉಂಟಾಗದಂತೆ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳಬೇಕು. ಎಲ್ಲ ತಾಲೂಕು ಪಂಚಾಯಿತಿ ಇಒಗಳು ತಮ್ಮ ವ್ಯಾಪ್ತಿಯ ಗ್ರಾಮಗಳಲ್ಲಿ ಸಮರ್ಪಕ ಕುಡಿಯುವ ನೀರು ಪೂರೈಕೆ ಆಗುತ್ತಿರುವ ಬಗ್ಗೆ ಖಚಿತಪಡಿಸಿಕೊಳ್ಳಬೇಕು ಎಂದು ಸೂಚಿಸಿದರು.

### ರೈತರಿಗೆ ಸಮರ್ಪಕ ಬೀಜ-ಗೊಬ್ಬರ ಪೂರೈಕೆಗೆ ಸೂಚನೆ

ಮುಂಗಾರು ಹಂಗಾಮು ಸಮೀಪಿಸುತ್ತಿರುವ ಹಿನ್ನೆಲೆಯಲ್ಲಿ ರೈತರಿಗೆ ಬಿತ್ತನೆ ಬೀಜ ಹಾಗೂ ರಸಗೊಬ್ಬರ ಸಮರ್ಪಕ ಪೂರೈಕೆ ಆಗಬೇಕು. ಯಾವುದೇ ಕಾರಣಕ್ಕೂ ಬೀಜ ಹಾಗೂ ಗೊಬ್ಬರ ವಿತರಣೆಯಲ್ಲಿ ಅವ್ಯವಸ್ಥೆ ನಡೆಯಬಾರದು ಎಂದು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಡಾ. ಎಂ.ವಿ. ವೆಂಕಟೇಶ್ ಎಚ್ಚರಿಸಿದರು.

ತೋಟಗಾರಿಕೆ ಬೆಳೆಗಳ ಕ್ಷೇತ್ರ ವಿಸ್ತರಣೆಗೆ ಜಿಲ್ಲೆಯಲ್ಲಿ ಹೆಚ್ಚಿನ ಅವಕಾಶಗಳಿದ್ದು, ರೈತರಿಗೆ ಅಗತ್ಯ ಮಾರ್ಗದರ್ಶನ ಹಾಗೂ ಸೌಲಭ್ಯ ಒದಗಿಸುವಂತೆ ಅವರು ಸೂಚಿಸಿದರು.

▸▸3ನೇ ಪುಟಕ್ಕೆ

### "ಜನರು ನೀರಿಗಾಗಿ ಪರದಾಡುವ ಸ್ಥಿತಿ ನಿರ್ಮಾಣವಾಗಿದೆ; ಶೀಘ್ರ ಕ್ರಮ ಕೈಗೊಳ್ಳಿ" – ಬೆಂಗಳೂರು ಗ್ರಾಮೀಣಾಭಿವೃದ್ಧಿ ಆಯುಕ್ತರು

# ತಿಮ್ಮಾಪುರಕ್ಕೆ ಆಯುಕ್ತರ ದಿಢೀರ್ ಭೇಟಿ: ನೀರಿನ ಸಮಸ್ಯೆಗೆ ವಾರದ ಗಡುವು!

■ವಿಜಯಸಾಕ್ಷಿ ಸುದ್ದಿ, ಗದಗ

ತೀವ್ರ ಕುಡಿಯುವ ನೀರಿನ ಅಭಾವ ಎದುರಿಸುತ್ತಿರುವ ಗದಗ ತಾಲೂಕಿನ ತಿಮ್ಮಾಪುರ ಗ್ರಾಮಕ್ಕೆ ಬೆಂಗಳೂರು ಗ್ರಾಮೀಣಾಭಿವೃದ್ಧಿ ಆಯುಕ್ತರು ದಿಢೀರ್ ಭೇಟಿ ನೀಡಿ ಗ್ರಾಮದಲ್ಲಿನ ನೀರಿನ ಸಮಸ್ಯೆ ಕುರಿತು ಪರಿಶೀಲನೆ ನಡೆಸಿದರು.

ಗ್ರಾಮದಲ್ಲಿನ ಸಂಪೂರ್ಣ ಬತ್ತಿಹೋಗಿರುವ ಕುಡಿಯುವ ನೀರಿನ ಕೆರೆಯನ್ನು ವೀಕ್ಷಿಸಿದ ಆಯುಕ್ತರು, ಗ್ರಾಮಸ್ಥರೊಂದಿಗೆ ಸಮಾಲೋಚನೆ ನಡೆಸಿ ಸಮಸ್ಯೆಯ ಗಂಭೀರತೆಯನ್ನು ಅರಿತುಕೊಂಡರು. ಈ ವೇಳೆ ಗ್ರಾಮಸ್ಥರು ಶಾಶ್ವತ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವಂತೆ ಮನವಿ ಸಲ್ಲಿಸಿದರು.

"ಜಿಲ್ಲಾಧಿಕಾರಿಗಳೊಂದಿಗೆ ಚರ್ಚಿಸಿ ಗ್ರಾಮಕ್ಕೆ ಅಗತ್ಯ ಕ್ರಮ ಕೈಗೊಳ್ಳಬೇಕು. ಸಾರ್ವಜನಿಕರು ನೀರಿಗಾಗಿ ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಶೀಘ್ರದಲ್ಲೇ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಿ" ಎಂದು ಸ್ಥಳದಲ್ಲಿದ್ದ ಅಧಿಕಾರಿಗಳಿಗೆ ಆಯುಕ್ತರು ತಾಕೀತು ಮಾಡಿದರು.

ಬಹುಗ್ರಾಮ ಕುಡಿಯುವ ನೀರಿನ ಯೋಜನೆ ಹಾಗೂ ಜಲ ಜೀವನ್ ಮಿಷನ್ (ಜೆಜೆಎಂ) ಕಾಮಗಾರಿಗಳ



ಕುರಿತು ಮಾಹಿತಿ ಪಡೆದ ಅವರು, ಕಾಮಗಾರಿಗಳ ವಿಳಂಬದ ಬಗ್ಗೆ ಅಧಿಕಾರಿಗಳನ್ನು ತರಾಟೆಗೆ ತೆ-ಗೆದುಕೊಂಡರು. ತುಂಗಭದ್ರಾ ನದಿಯಿಂದ ಗ್ರಾಮಕ್ಕೆ ಸರಬರಾಜಾಗುತ್ತಿರುವ ನೀರಿನ ಪ್ರಮಾಣದ ಕುರಿತು ಸಹ ವಿವರ ಕೇಳಿದರು.

ಈ ವೇಳೆ "ಗ್ರಾಮಕ್ಕೆ ಪ್ರತಿದಿನ ಎಷ್ಟು ನೀರು ಸರಬರಾಜು ಮಾಡಲಾಗುತ್ತಿದೆ?" ಎಂದು ಆಯುಕ್ತರು ಪ್ರಶ್ನಿಸಿದಾಗ, ಸಂಬಂಧಿಸಿದ ಅಧಿಕಾರಿಗಳು "ಮೂರು ಲಕ್ಷ ಲೀಟರ್ ನೀರು ಪೂರೈಕೆ ಮಾಡಲಾಗುತ್ತಿದೆ" ಎಂದು ಉತ್ತರಿಸಿದರು.

ಇದಕ್ಕೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದ ಗ್ರಾಮಸ್ಥರು, "ಅಧಿಕಾರಿಗಳು ಸುಳ್ಳು ಮಾಹಿತಿ ನೀಡುತ್ತಿದ್ದಾರೆ. ವಾರಕ್ಕೆ ಒಮ್ಮೆ ಮೂರು-ನಾಲ್ಕು ಕೊಡ ನೀರು ಕೂಡ ಸರಿಯಾಗಿ ಬರುತ್ತಿಲ್ಲ" ಎಂದು ದೂರಿದರು.

ಪರ್ಯಾಯ ವ್ಯವಸ್ಥೆ ಕುರಿತು ಚರ್ಚಿಸಿದ ಗ್ರಾಮಸ್ಥರು, ಲಕ್ಕುಂಡಿ ಮಾರ್ಗ ಮಧ್ಯದಲ್ಲಿರುವ ಕೆಸರಳ್ಳ ಬಳಿ ಬೋರ್‌ವೆಲ್ ಕೊರೆಸಿದರೆ ಗ್ರಾಮಕ್ಕೆ ಶಾಶ್ವತ ಪರಿಹಾರ ಸಿಗಬಹುದು ಎಂದು ಸಲಹೆ ನೀಡಿದರು.

ಗ್ರಾಮಸ್ಥರ ಅಹವಾಲು ಆಲಿಸಿದ ಆಯುಕ್ತರು ಹಾಗೂ ಜಿಲ್ಲಾಧಿಕಾರಿಗಳು, "ಒಂದು ವಾರದೊಳಗೆ ಸಮಸ್ಯೆ ಪರಿಹರಿಸಲು ಕ್ರಮ ಕೈಗೊಳ್ಳಲಾಗುವುದು" ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು, ತಹಶೀಲ್ದಾರ್, ಜಲಸಂಪನ್ಮೂಲ ಇಲಾಖೆ ಅಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯಿತಿ ಅಧಿಕಾರಿಗಳು ಉಪಸ್ಥಿತರಿದ್ದರು.

### ಸಹಸ್ರಾರು ಭಕ್ತರ ಸಮ್ಮುಖದಲ್ಲಿ ಶ್ರೀ ಮಂಜೂರ ಹುಸೇನ್ ಶಾವಲಿ ಅಜ್ಜನವರ ಭವ್ಯ ಮೆರವಣಿಗೆ

# ಭಾವೈಕ್ಯತೆಯ ಸಂದೇಶ ಸಾರಿದ ರಹಿಮಾನ್ ಶಾವಲಿ ಉರುಸು

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಮೇ 10ರಿಂದ 12ರವರೆಗೆ ನಡೆದ ರಹಿಮಾನ್ ಶಾವಲಿ ಉರುಸು ಮಂಗಳವಾರ ಸಂಭ್ರಮದ ತೆರೆ ಕಂಡಿತು. ನರೇಗಲ್ಲ ಸುತ್ತಮುತ್ತಲಿನ ಗ್ರಾಮಗಳಷ್ಟೇ ಅಲ್ಲದೆ ನೆರೆಯ ಜಿಲ್ಲೆಗಳಿಂದಲೂ ಸಹಸ್ರಾರು ಭಕ್ತರು ಆಗಮಿಸಿ ರಹಿಮಾನ್ ಶಾವಲಿ ಅಜ್ಜನವರ ಗದ್ದುಗೆಯ ಹಾಗೂ ಹಜರತ್ ಮಂಜೂರ ಹುಸೇನ್ ಶಾವಲಿ ಅವರ ದರ್ಶನಾಶೀರ್ವಾದ ಪಡೆದು ಪುನೀತರಾದರು.

ಮೇ 10ರಂದು ಸಂಜೆ ಕೋಚಲಾಪೂರ ಗ್ರಾಮದಿಂದ ಲಕ್ಷ್ಮಿದೇವಿಯ ಪಲ್ಲಕ್ಕಿ ಹಾಗೂ ಗಂಧದ ಮೆರವಣಿಗೆ ಹೊರಡುವ ಮೂಲಕ ಉರುಸಿಗೆ ವಿಧ್ಯುಕ್ತ ಚಾಲನೆ ನೀಡಲಾಯಿತು. ಡೊಳ್ಳು, ಕರಡಿ ಮಜಲು ಸೇರಿದಂತೆ ವಿವಿಧ ವಾದ್ಯಗಳ ನಾದದೊಂದಿಗೆ ಸಾಗಿದ ಲಕ್ಷ್ಮಿದೇವಿಯ ಮೆರವಣಿಗೆ ಭಕ್ತರ ಕಣ್ಮನ ಸೆಳೆಯಿತು.

ಮೇ 11ರಂದು ಬೆಳಗ್ಗೆಯಿಂದ ಸಾಧು-ಸಂತರಿಗೆ ಅನ್ನಸಂತರ್ಪಣೆ ಕಾರ್ಯಕ್ರಮ ನಡೆಯಿತು. ಸಂಜೆ ನಡೆದ ಹಜರತ್ ಮಂಜೂರ



> ಉರುಸಿನ ಅಂಗವಾಗಿ ಶ್ರೀ ಕಟ್ಟಿಬಸವೇಶ್ವರ ನಾಟ್ಯ ಸಂಘದ ಕಲಾವಿದರು ಅಭಿನಯಿಸಿದ 'ಧರ್ಮದ ನುಡಿ ಬೆಂಕಿಯ ಕಿಡಿ' ನಾಟಕಕ್ಕೂ ಉತ್ತಮ ಸ್ಪಂದನೆ ವ್ಯಕ್ತವಾಯಿತು. ಈ ಸಂದರ್ಭದಲ್ಲಿ ಶ್ರೀಗಳವರು ನರೇಗಲ್ಲ ಪಟ್ಟಣದಲ್ಲಿನ ಹಿಂದೂ-ಮುಸ್ಲಿಂ ಭಾವೈಕ್ಯತೆಯನ್ನು ಶ್ಲಾಘಿಸಿ, ಈ ಸೌಹಾರ್ದತೆ ನಿರಂತರವಾಗಿರಲಿ ಎಂದು ಆಶಿಸಿದರು.

ಹುಸೇನ್ ಶಾವಲಿ ಅವರ ಭವ್ಯ ಮೆರವಣಿಗೆಯು ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಭಕ್ತಿಭಾವದ ವಾತಾವರಣ ನಿರ್ಮಿಸಿತು. ರಸ್ತೆಯ ಇಕ್ಕೆಲಗಳಲ್ಲಿ ಸಹಸ್ರಾರು ಭಕ್ತರು ಶಿಸ್ತಿನಿಂದ ನಿಂತು ಶ್ರೀಗಳವರ ದರ್ಶನಾಶೀರ್ವಾದ ಪಡೆದುಕೊಂಡರು.

ದರಗಾದಿಂದ ಆರಂಭವಾದ ಮೆರವಣಿಗೆಯು ಹಳೆ ಬಜಾರ್, ಶ್ರೀ ಗಣೇಶ ದೇವಸ್ಥಾನ, ಶ್ರೀ ವೀರಭದ್ರೇಶ್ವರ ದೇವಸ್ಥಾನ, ಕೊಂತಿ ಮಲ್ಲಪ್ಪನ ದೇವಸ್ಥಾನ, ಮುಖ್ಯ ರಸ್ತೆ, ಹೊಸ ಬಸ್ ನಿಲ್ದಾಣ ಸೇರಿದಂತೆ ವಿವಿಧ ಮಾರ್ಗಗಳಲ್ಲಿ ಸಂಚರಿಸಿ ಮರಳಿ ದರಗಾಕ್ಕೆ ತಲುಪಿತು. ಮೆರವಣಿಗೆ ಸಾಗಿದ ಎಲ್ಲೆಡೆ ಭಕ್ತರು ಹರ್ಷೋದ್ಗಾರ ಮೊಳಗಿಸಿ ಸಂಭ್ರಮಿಸಿದರು.

ನಂತರ ನಡೆದ ದೀಪೋತ್ಸವ ಹಾಗೂ ಮದ್ದು ಸುಡುವ ಕಾರ್ಯಕ್ರಮ ಭಕ್ತರಿಗೆ ವಿಶೇಷ ಆಕರ್ಷಣೆಯಾಯಿತು. ಮಂಗಳವಾರ ಬೆಳಗ್ಗೆ ನಡೆದ ಮರಿ ಉರುಸಿನೊಂದಿಗೆ ಈ ವರ್ಷದ ಉರುಸು ಸಂಪನ್ನಗೊಂಡಿತು.

### ಸೂಪರ್ ಎಲ್‌ನಿನೋ ಆತಂಕದ ನಡುವೆ ಸುರಿದ ಮಳೆ; ಬಿತ್ತನೆಗೆ ಉತ್ಸಾಹಗೊಂಡ ರೈತರು

# ಕೃತಿಕಾ ಮಳೆಗೆ ಖುಷಿಯಾದ ರೈತರು!


■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕಳೆದ ಎರಡು ದಿನಗಳಿಂದ ಲಕ್ಷ್ಮೇಶ್ವರ ಸೇರಿದಂತೆ ತಾಲೂಕಿನಾದ್ಯಂತ ಸುರಿದ ಉತ್ತಮ ಮಳೆಯಿಂದ ರೈತ ಸಮುದಾಯದಲ್ಲಿ ಮಂದಹಾಸ ಮನೆ ಮಾಡಿದ್ದು, ಮುಂಗಾರು ಕೃಷಿ ಚಟುವಟಿಕೆಗಳಿಗೆ ಹೊಸ ಚೈತನ್ಯ ದೊರೆತಿದೆ. ಪ್ರಸಕ್ತ ಮುಂಗಾರಿನಲ್ಲಿ ಸೂಪರ್ ಎಲ್‌ನಿನೋ ಪರಿಣಾಮದಿಂದ ಮಳೆ ಕೊರತೆಯಾಗಲಿದೆ ಎಂಬ ವರದಿಗಳಿಂದ ರೈತರು ಆತಂಕಕ್ಕೀಡಾಗಿದ್ದರು. ಆದರೆ ಕಳೆದ ಎರಡು-ಮೂರು ದಿನಗಳಿಂದ ತಾಲೂಕಿನಾದ್ಯಂತ ಸುರಿದ ಉತ್ತಮ ಮಳೆಯಿಂದ ಭೂಮಿ ತಂಪಾಗಿದ್ದು, ರೈತರಲ್ಲಿ ಹೊಸ ಆಶಾಭಾವ ಮೂಡಿಸಿದೆ.

ಈ ವರ್ಷ ತೀವ್ರ ಬಿಸಿಲಿನ ತಾಪಮಾನ ಹಾಗೂ ಕಳೆದ ಹಿಂಗಾರು ಮಳೆಯ ಕೊರತೆಯಿಂದ ಕೆರೆ-ಕಟ್ಟೆ, ಹಳ್ಳಗಳಲ್ಲಿ ನೀರು ಬತ್ತಿಹೋಗಿತ್ತು. ಇದರಿಂದ ಜನ, ಜಾನುವಾರು, ಕುರಿ ಹಾಗೂ ಕಾಡು ಪ್ರಾಣಿ-ಪಕ್ಷಿಗಳು ನೀರಿನ ಅಭಾವದಿಂದ ತತ್ತರಿಸುವಂತಾಗಿತ್ತು. ಇದೀಗ ಸುರಿದ ಮಳೆಯಿಂದ ಜಮೀನಿನ ತಗ್ಗು ಪ್ರದೇಶ, ಕೆರೆ ಹಾಗೂ ಹಳ್ಳಗಳಲ್ಲಿ ಅಲ್ಪಸ್ವಲ್ಪ ನೀರು ಸಂಗ್ರಹವಾಗಿ ಜನರಲ್ಲಿ ನೆಮ್ಮದಿ ಮೂಡಿಸಿದೆ.

ತಾಲೂಕಿನ ಯಳವತ್ತಿ, ಯತ್ನಳ್ಳಿ, ಮಾಗಡಿ, ಗೊಜನೂರ, ಅಕ್ಕಿಗುಂದ, ಆದ್ರಳ್ಳಿ, ಬಡ್ನಿ, ಬಟ್ಟೂರ, ಸೂರಣಗಿ, ಹುಲ್ಲೂರ, ಬಾಲೆಹೊಸೂರ, ಶಿಗ್ಲಿ, ದೊಡ್ಡೂರ, ರಾಮಗೇರಿ, ಬಸಾಪುರ ಹಾಗೂ ಅಡರಕಟ್ಟಿ ಸೇರಿದಂತೆ ಹಲವೆಡೆ ಉತ್ತಮ ಮಳೆಯಾಗಿದೆ.

ಮುಂಗಾರಿನ ಮೊದಲ ಮಳೆಯ ಹಿನ್ನೆಲೆಯಲ್ಲಿ ಪಟ್ಟಣದಲ್ಲಿ ತ್ಯಾಜ್ಯದಿಂದ ತುಂಬಿದ್ದ ಚರಂಡಿಗಳ ಕೊಳಚೆ ನೀರು ರಸ್ತೆ ಮೇಲೆ ಹರಿದು ಸಂಚಾರಕ್ಕೆ ಅಡಚಣೆ ಉಂಟಾಯಿತು.



ಎರಡು ದಿನಗಳಿಂದ ವಿದ್ಯುತ್ ವ್ಯತ್ಯಯದಿಂದ ಜನರು ಪರದಾಡುವಂತಾಯಿತು. ತಾಲೂಕಿನ ಬಹುತೇಕ ರಸ್ತೆಗಳು ಹದಗೆಟ್ಟಿರುವುದರಿಂದ ವಾಹನ ಸವಾರರು ತೊಂದರೆ ಅನುಭವಿಸಿದರು.

ಮುಂಗಾರು ಪೂರ್ವ ಮಳೆಯ ಕೊರತೆಯ ನಡುವೆಯೂ ರೈತರು ಮಳೆರಾಯನ ನಿರೀಕ್ಷೆಯಲ್ಲಿ ಟ್ರ್ಯಾಕ್ಟರ್‌ಗಳ ಮೂಲಕ ಭೂಮಿ ಹದ ಮಾಡಿ, ಕಸ ಆರಿಸಿ ಬಿತ್ತನೆಗೆ ಸಜ್ಜಾಗಿದ್ದರು.

> "ಮುಂಗಾರು ಬಿತ್ತನೆ ಆರಂಭದ ಹಂತದಲ್ಲಿರುವುದರಿಂದ ಕೃಷಿ ಇಲಾಖೆಯವರು ಗೊಬ್ಬರ ಕೊರತೆ ನಿವಾರಣೆ ಮಾಡಿ, ಸಹಾಯಧನದಡಿ ಬೀಜ ಹಾಗೂ ಕೃಷಿ ಯಂತ್ರೋಪಕರಣಗಳನ್ನು ರೈತರಿಗೆ ಸಕಾಲಕ್ಕೆ ಪೂರೈಸಲು ತುರ್ತು ಕ್ರಮ ಕೈಗೊಳ್ಳಬೇಕು. ಮಳೆ ಬಂದಿರುವ ಈ ಸಂದರ್ಭದಲ್ಲಿ ರೈತರಿಗೆ ಅಗತ್ಯ ಸೌಲಭ್ಯ ದೊರೆತರೆ ಬಿತ್ತನೆ ಕಾರ್ಯ ಸುಗಮವಾಗಲಿದೆ"
>
> **– ಸೋಮನಗೌಡ್ರ ಪಾಟೀಲ,** ಚನ್ನಪ್ಪ ಷಣ್ಮುಕಿ ಹಾಗೂ ಬಾಪೂಗೌಡ ಭರಮಗೌಡ್ರ,

ಇದೀಗ ಸುರಿದ ಮಳೆಯಿಂದ ಭೂಮಿಯಲ್ಲಿ ಉತ್ತಮ ತೇವಾಂಶ ನಿರ್ಮಾಣವಾಗಿದ್ದು, ರೈತರು ಬೀಜ, ಗೊಬ್ಬರ ಹಾಗೂ ಕೃಷಿ ಪರಿಕರಗಳ ಸಿದ್ಧತೆಯಲ್ಲಿ ತೊಡಗಿದ್ದಾರೆ.

ಬಿತ್ತನೆಗೆ 10ರಿಂದ 15 ದಿನಗಳ ಮುಂಚಿತವಾಗಿ ಮಳೆಯಾಗುವುದರಿಂದ ಭೂಮಿಯಲ್ಲಿನ ಯರಕಲುಬಿಡಿ ಮುಚ್ಚಿ ತೇವಾಂಶ ಉಳಿಯುತ್ತದೆ. ಕಳೆ ಬೀಜ ಮೊಳಕೆಯಾಗಿ ಮತ್ತೊಮ್ಮೆ ಹರಗಿ ಬಿತ್ತಿದರೆ ಕಳೆ ಪ್ರಮಾಣ ಕಡಿಮೆಯಾಗುತ್ತದೆ. ಉತ್ತಮ ತೇವಾಂಶದಲ್ಲಿ ಬೀಜಗೊಬ್ಬರ ಹಾಕಿ ಬಿತ್ತಿದ-ರೆ ಮೊಳಕೆ ಸದೃಢವಾಗಿ ಬರುತ್ತದೆ ಎಂದು ರೈತರು ಅಭಿಪ್ರಾಯಪಟ್ಟಿದ್ದಾರೆ. ಆದಾಗ್ಯೂ ಕೆರೆ, ಕೃಷಿಹೊಂಡ, ಹಳ್ಳ ಹಾಗೂ ಬದುವು-ಬಾಂದಾರಗಳಲ್ಲಿ ಸಮರ್ಪಕ ನೀರು ಸಂಗ್ರಹವಾಗಲು ಇನ್ನಷ್ಟು ಉತ್ತಮ ಮಳೆಯ ಅಗತ್ಯವಿದೆ. ಮಳೆ ಹೆಚ್ಚಾದರೆ ಅಂತರ್ಜಲ ಮಟ್ಟ ಏರಿಕೆಯಾಗುವ ಜೊತೆಗೆ ಉತ್ತಮ ಬೆಳೆಯ ನಿರೀಕ್ಷೆ ಮೂಡಲಿದೆ ಎಂಬುದು ರೈತ ಸಮುದಾಯದ ಅಭಿಪ್ರಾಯವಾಗಿದೆ.

ಆಗಸ್ಟ್ ಹಾಗೂ ಸೆಪ್ಟೆಂಬರ್ ತಿಂಗಳಲ್ಲಿ ಮಳೆ ಪ್ರಮಾಣ ಕಡಿಮೆಯಾಗುವ ಸಾಧ್ಯತೆ ಇದೆ ಎಂಬ ವರದಿಯಿಂದ ಯಾವ ಬೆಳೆ ಬೆಳೆಯಬೇಕು ಎಂಬ ಚಿಂತೆಯೂ ರೈತರಲ್ಲಿ ಮನೆ ಮಾಡಿದೆ. ಆದಷ್ಟು ಬೇಗ ಬಿತ್ತನೆ ಮಾಡಿದರೆ ಅನುಕೂಲವಾಗಬಹುದು ಎಂಬ ನಿರೀಕ್ಷೆಯಲ್ಲಿ ಮೇ ಮೂರನೇ ವಾರದಲ್ಲೇ ಬಿತ್ತನೆಗೆ ರೈತರು ಸಜ್ಜಾಗಿದ್ದಾರೆ.

ಈ ಕುರಿತು ಕೃಷಿ ಇಲಾಖೆ ಅಧಿಕಾರಿಗಳನ್ನು ಸಂಪರ್ಕಿಸಿದಾಗ, ರೈತರಿಗೆ ಸಕಾಲಕ್ಕೆ ಬೀಜ ಹಾಗೂ ಗೊಬ್ಬರ ಪೂರೈಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

## ಹಳ್ಳಿಕೇರಿ 'ಅರಿವು ಕೇಂದ್ರ' ಗ್ರಂಥಾಲಯಕ್ಕೆ ಉಸ್ತುವಾರಿ ಕಾರ್ಯದರ್ಶಿ ಭೇಟಿ



■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಮುಂಡರಗಿ ತಾಲೂಕಿನ ಹಳ್ಳಿಕೇರಿ ಗ್ರಾಮದಲ್ಲಿರುವ 'ಅರಿವು ಕೇಂದ್ರ' ಗ್ರಾಮ ಪಂಚಾಯಿತಿ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರಕ್ಕೆ ಡಾ. ಎಂ.ವಿ. ವೆಂಕಟೇಶ್ ಭೇಟಿ ನೀಡಿ ಗ್ರಂಥಾಲಯದ ಕಾರ್ಯವೈಖರಿ ಹಾಗೂ ಸೌಲಭ್ಯಗಳನ್ನು ವೀಕ್ಷಿಸಿದರು.

ಗ್ರಂಥಾಲಯದಲ್ಲಿ ಸಾರ್ವಜನಿಕರಿಗೆ ಒದಗಿಸಲಾಗುತ್ತಿರುವ ಮಾಹಿತಿ ಸೇವೆಗಳು, ಪುಸ್ತಕ ಸಂಗ್ರಹ, ಓದುಗರಿಗೆ ಕಲ್ಪಿಸಿರುವ ಮೂಲ ಸೌಲಭ್ಯಗಳು ಹಾಗೂ ಮಾಹಿತಿ ಕೇಂದ್ರದ ನಿರ್ವಹಣೆ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದರು.

ಈ ಸಂದರ್ಭದಲ್ಲಿ ಸಿ.ಎನ್. ಶ್ರೀಧರ್, ಗಂಗಪ್ಪ ಎಂ, ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಊರಿನ ಹಿರಿಯರು ಉಪಸ್ಥಿತರಿದ್ದರು.

### ಜೂನ್ 15ರಿಂದ 17 ವಾರ್ಡ್‌ಗಳಿಗೆ ನಿರಂತರ ಕುಡಿಯುವ ನೀರು ಪೂರೈಕೆ; ಸಚಿವ ಸಂತೋಷ ಲಾಡ್ ಘೋಷಣೆ

# ಕಲಘಟಗಿಯಲ್ಲಿ ಇನ್ನು ದಿನದ 24 ಗಂಟೆ ನೀರು!

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಕಲಘಟಗಿ ಪಟ್ಟಣ ಪಂಚಾಯತ್ ವ್ಯಾಪ್ತಿಯ 17 ವಾರ್ಡ್‌ಗಳಿಗೆ ದಿನದ 24 ಗಂಟೆ ನಿರಂತರ ಕುಡಿಯುವ ನೀರು ಸರಬರಾಜು ಮಾಡುವ ಯೋಜನೆ ಜೂನ್ 15ರಿಂದ ಆರಂಭವಾಗಲಿದೆ ಎಂದು ಸಂತೋಷ ಎಸ್. ಲಾಡ್ ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿಯ ನೂತನ ಸಭಾಂಗಣದಲ್ಲಿ ನಡೆದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯಲ್ಲಿ ಬೇಸಿಗೆ ಕುಡಿಯುವ ನೀರು, ಜಾನುವಾರು ಮೇವು, ಅಕಾಲಿಕ ಮಳೆಯಿಂದ ಉಂಟಾದ ಹಾನಿ ಹಾಗೂ ಪರಿಹಾರ ಕ್ರಮಗಳ ಕುರಿತು ಪರಿಶೀಲನೆ ನಡೆಸಿ ಅವರು ಮಾತನಾಡಿದರು.

ಕಲಘಟಗಿ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿ 17 ವಾರ್ಡ್‌ಗಳಿದ್ದು, 19 ಸಾವಿರಕ್ಕೂ ಹೆಚ್ಚು ಜನಸಂಖ್ಯೆ ಹೊಂದಿದೆ. ಪ್ರಸ್ತುತ ಪ್ರತಿದಿನ 3 ಎಂಎಲ್‌ಡಿ ನೀರು ಸರಬರಾಜು ಮಾಡಲಾಗುತ್ತಿದೆ. ರೂ. 35.38 ಕೋಟಿ ವೆಚ್ಚದ 24ಥ7 ನಿರಂತರ ನೀರು ಯೋಜನೆಯ ಕಾಮಗಾರಿ ಮೇ 18, 2024ರಂದು ಆರಂಭಗೊಂಡಿದ್ದು, ಇದೀಗ ಅಂತಿಮ ಹಂತ ತಲುಪಿದೆ ಎಂದು ಸಚಿವರು ತಿಳಿಸಿದರು.

ಅಣ್ಣಿಗೇರಿ, ನವಲಗುಂದ ಹಾಗೂ ಕುಂದಗೋಳ ಪಟ್ಟಣಗಳಲ್ಲಿಯೂ ಇದೇ ರೀತಿಯ ಕಾಮಗಾರಿಗಳನ್ನು ಶೀಘ್ರ ಪೂರ್ಣಗೊಳಿಸಿ ಸಾರ್ವಜನಿಕರಿಗೆ ನಿರಂತರ ನೀರು ಪೂರೈಕೆ ಮಾಡಲು ಕ್ರಮವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.



ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕುಡಿಯುವ ನೀರು ಸರಬರಾಜು ವ್ಯವಸ್ಥೆ ಸುಧಾರಣೆಗೊಂಡಿದ್ದು, ಈ ಹಿಂದೆ 8 ರಿಂದ 15 ದಿನಕ್ಕೊಮ್ಮೆ ನೀರು ಸರಬರಾಜಾಗುತ್ತಿದ್ದರೆ ಈಗ 4 ರಿಂದ 5 ದಿನಕ್ಕೊಮ್ಮೆ ಪೂರೈಕೆ ಮಾಡಲಾಗುತ್ತಿದೆ ಎಂದು ಹೇಳಿದರು. ಮಹಾನಗರ ಪಾಲಿಕೆ ಆಯುಕ್ತ ಡಾ. ರುದ್ರೇಶ ಘಾಳಿ ಹಾಗೂ ತಂಡದ ಕಾರ್ಯವೈಖರಿಯನ್ನು ಸಚಿವರು ಶ್ಲಾಘಿಸಿದರು.

ಮುಂಗಾರು ಹಂಗಾಮು ಆರಂಭವಾಗುತ್ತಿರುವ ಹಿನ್ನೆಲೆಯಲ್ಲಿ ರೈತರಿಗೆ ಅಗತ್ಯ ಪ್ರಮಾಣದಲ್ಲಿ ಬೀಜ ಹಾಗೂ ರಾಸಾಯನಿಕ ಗೊಬ್ಬರ ದಾಸ್ತಾನು ಮಾಡಿ ವಿತರಿಸಬೇಕು. ರೈತ ಸಂಪರ್ಕ ಕೇಂದ್ರ ಹಾಗೂ ಸಹಕಾರಿ ಸಂಘಗಳ ಮೂಲಕ ಸಕಾಲದಲ್ಲಿ ಪೂರೈಕೆ ಆಗುವಂತೆ ಕ್ರಮ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

> "ಕಲಘಟಗಿ ಪಟ್ಟಣದ 17 ವಾರ್ಡ್‌ಗಳಿಗೆ ಜೂನ್ 15ರಿಂದ 24ಥ7 ನಿರಂತರ ಕುಡಿಯುವ ನೀರು ಸರಬರಾಜು ಯೋಜನೆ ಜಾರಿಯಾಗಲಿದೆ."
> **– ಸಂತೋಷ ಎಸ್. ಲಾಡ್,**
> ಜಿಲ್ಲಾ ಉಸ್ತುವಾರಿ ಸಚಿವ

ಸರ್ಕಾರ ರೈತರಿಗೆ ಎಫ್‌ಐಡಿ ಸಂಖ್ಯೆಯನ್ನು ಕಡ್ಡಾಯಗೊಳಿಸಿದ್ದು, ಜಿಲ್ಲೆಯಲ್ಲಿ ಈಗಾಗಲೇ ಶೇ.77ಕ್ಕಿಂತ ಹೆಚ್ಚು ರೈತರು ನೋಂದಣಿ ಮಾಡಿಕೊಂಡಿದ್ದಾರೆ. ಉಳಿದ ರೈತರ ಮನೆ ಬಾಗಿಲಿಗೆ ತೆರಳಿ ನೋಂದಣಿ ಪೂರ್ಣಗೊಳಿಸಬೇಕು ಎಂದು ತಿಳಿಸಿದರು. ಸಭೆಯಲ್ಲಿ ಸ್ನೇಹಲ್ ಆರ್. ಜಿಲ್ಲೆಯ ಕುಡಿಯುವ ನೀರು ಹಾಗೂ ಮೇವು ಸ್ಥಿತಿಗತಿಯ ಕುರಿತು ಮಾಹಿತಿ ನೀಡಿದರು.

ವೇದಿಕೆಯಲ್ಲಿ ಭುವನೇಶ ಪಾಟೀಲ, ಗೀತಾ ಸಿ.ಡಿ. ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

**ಜಿಲ್ಲೆಯಲ್ಲಿ ಮೇವು ದಾಸ್ತಾನು ಸಮರ್ಪಕ**

- ಜಿಲ್ಲೆಯಲ್ಲಿ ಒಟ್ಟು 2,35,059 ದನ–ಎಮ್ಮೆಗಳು 1,49,220 ಕುರಿ–ಮೇಕೆಗಳು
- ಪ್ರಸ್ತುತ ಲಭ್ಯ ಮೇವು : 5,06,588.81 ಮೆಟ್ರಿಕ್ ಟನ್
- ಮುಂದಿನ 49 ವಾರಗಳಿಗೆ ಸಾಕಾಗುವಷ್ಟು ಮೇವು ದಾಸ್ತಾನು ಲಭ್ಯ
- ನವಲಗುಂದ ತಾಲೂಕಿನಲ್ಲಿ : 86 ವಾರಗಳಿಗೆ ಸಾಕಾಗುವಷ್ಟು ಮೇವು
- ಅಣ್ಣಿಗೇರಿ ತಾಲೂಕಿನಲ್ಲಿ : 83 ವಾರಗಳಿಗೆ ಸಾಕಾಗುವಷ್ಟು ಮೇವು

### ವಿಶ್ವ ತಾಯಂದಿರ ದಿನಾಚರಣೆಯಲ್ಲಿ ಸಾಧಕ ತಾಯಂದಿರಿಗೆ ಗೌರವ ಸನ್ಮಾನ

# "ತಾಯಿಯ ತ್ಯಾಗ–ಪ್ರೀತಿ ಸಮಾಜಕ್ಕೆ ಆದರ್ಶ"

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ತಾಲೂಕಿನ ಹಂಪಾಪಟ್ಟಣ ಗ್ರಾಮದಲ್ಲಿ ಶ್ರೀಮಾತಾ ಸೇವಾ ಟ್ರಸ್ಟ್ ವತಿಯಿಂದ ವಿಶ್ವ ತಾಯಂದಿರ ದಿನಾಚರಣೆಯನ್ನು ನಗರೇಶ್ವರ ದೇವಸ್ಥಾನದಲ್ಲಿ ಭಾನುವಾರ ಸಂಜೆ ಆಚರಿಸಲಾಯಿತು.

ಕಾರ್ಯಕ್ರಮವನ್ನು ಗ್ರಾಮ ಪಂಚಾಯಿತಿ ಅಧ್ಯಕ್ಷೆ ಪತ್ರಿ ಗೀತಾ ಎಲ್ಲಪ್ಪ ಉದ್ಘಾಟಿಸಿ ಮಾತನಾಡಿ, ತಾಯಿಯ ತ್ಯಾಗ, ಪ್ರೀತಿ ಹಾಗೂ ಸೇವೆ ಸಮಾಜಕ್ಕೆ ಆದರ್ಶವಾಗಿದ್ದು, ಪ್ರತಿಯೊಬ್ಬರೂ ತಾಯಂದಿರ ಗೌರವವನ್ನು ಕಾಪಾಡಬೇಕು ಎಂದು ಹೇಳಿದರು.

ಗ್ರಾಮ ಪಂಚಾಯಿತಿ ಉಪಾಧ್ಯಕ್ಷ ಟಿ. ಮಂಜುನಾಥ ಮಾತನಾಡಿ, ತಾಯಿಯ ಮಮತೆ ಮತ್ತು ಕಾಳಜಿ ಜೀವನದ ಅಮೂಲ್ಯ ಶಕ್ತಿಯಾಗಿದ್ದು, ಕುಟುಂಬ ಮತ್ತು ಸಮಾಜದ ನಿರ್ಮಾಣದಲ್ಲಿ ತಾಯಿಯ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ಅಭಿಪ್ರಾಯಪಟ್ಟರು.



ಉಪನ್ಯಾಸಕರಾಗಿ ಮಾತನಾಡಿದ ಮಣಿಗಾರ್ ಉಮೇಶ್, ತಾಯಿಯೇ ಮಕ್ಕಳಿಗೆ ಸಂಸ್ಕೃತಿ ಮತ್ತು ಶಿಸ್ತು ಕಲಿಸುವ ಮೊದಲ ಗುರುವಾಗಿದ್ದು, ಉತ್ತಮ ಸಮಾಜ ನಿರ್ಮಾಣದಲ್ಲಿ ತಾಯಂದಿರ ಪಾತ್ರ ಅಪಾರವಾಗಿದೆ ಎಂದು ತಿಳಿಸಿದರು.

> "ತಾಯಿಯ ಮಮತೆ, ತ್ಯಾಗ ಮತ್ತು ಸೇವೆ ಸಮಾಜದ ಶಕ್ತಿ. ತಾಯಂದಿರ ಗೌರವ ಕಾಪಾಡುವುದು ಪ್ರತಿಯೊಬ್ಬರ ಕರ್ತವ್ಯ."
> – ಪತ್ರಿ ಗೀತಾ ಎಲ್ಲಪ್ಪ, ಅಧ್ಯಕ್ಷರು

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿ. ಶ್ರೀನಿವಾಸ ಮಾತನಾಡಿ, ಸಮಾಜದಲ್ಲಿ ವಿಶೇಷ ಸಾಧನೆ ಮಾಡಿದ ತಾಯಂದಿರನ್ನು ಗುರುತಿಸಿ ಗೌರವಿಸುವುದು ಟ್ರಸ್ಟ್‌ನ ಮುಖ್ಯ ಉದ್ದೇಶವಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಶ್ರೀಮತಿ ಸುಜಾತ ಅವರು ತಾಯಿಯ ಪ್ರೀತಿ, ಮಮತೆ ಹಾಗೂ ತ್ಯಾಗದ ಮಹತ್ವದ ಕುರಿತು ಮನದಾಳದ ಮಾತುಗಳನ್ನಾಡಿದರು.

ಕಾರ್ಯಕ್ರಮದಲ್ಲಿ ಸಮಾಜದಲ್ಲಿ ವಿಶೇಷ ಸಾಧನೆ ಮಾಡಿದ ಏಳು ಜನ ತಾಯಂದಿರನ್ನು ಸನ್ಮಾನಿಸಲಾಯಿತು. ಬಳೆಗಾರ ಹೇಮಾಕ್ಷಿ, ಹೆಚ್. ದ್ರಾಕ್ಷಾಯಿಣಿ, ಎಸ್. ಲಕ್ಕಮ್ಮ, ಎಸ್. ಶೇಖಮ್ಮ, ಓಬಳಾಪುರ ಹನುಮಮ್ಮ, ನಗಿನಾಬೀ ಹಾಗೂ ಬಟಾಣಿ ಮಹಾದೇವಿ ಅವರು ಗೌರವ ಸನ್ಮಾನ ಸ್ವೀಕರಿಸಿದರು.

ಮುಖ್ಯ ಅತಿಥಿಗಳಾಗಿ ಕೆ. ಹುಲುಗಪ್ಪ, ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಬಲ್ಲಾಹುಣಿಸಿ ನಾಗರಾಜ, ಆರ್. ಸುಮಾ, ಆರ್. ಬಸವರಾಜ್, ಹಡಗಲಿ ಖಾಜಾ, ಓ. ಕೊಟ್ರೇಶ್, ಕೆ.ಎಸ್. ಹುಲುಗಪ್ಪ, ಜಿ. ಫಕೀರಪ್ಪ ಹಾಗೂ ಕೇಶವಮೂರ್ತಿ ಉಪಸ್ಥಿತರಿದ್ದರು.

ಸಿ. ನಾಗರಾಜ್ ಕಾರ್ಯಕ್ರಮ ನಿರೂಪಿಸಿದರು. ಕುಮಾರಿ ಅಪ್ಸರ ಪ್ರಾರ್ಥನೆ ಸಲ್ಲಿಸಿದರು. ಕಲಾಲ್ ಸುರೇಶ್ ವಂದನಾರ್ಪಣೆ ನೆರವೇರಿಸಿದರು.

# ಮನೆಮನೆಗೂ ತಲುಪಲಿ ಪಂಚ ಗ್ಯಾರಂಟಿ ಯೋಜನೆಗಳು

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು ಪ್ರತಿಯೊಂದು ಮನೆಗೂ ತಲುಪಬೇಕು ಎಂದು ತಾಲೂಕು ಗ್ಯಾರಂಟಿ ಯೋಜನೆಗಳ ಸಮಿತಿ ಅಧ್ಯಕ್ಷ ಸೊನ್ನದ ಗುರು ಬಸವರಾಜ್ ಹೇಳಿದರು.

ತಾಲೂಕು ಪಂಚಾಯಿತಿ ಮಹಾತ್ಮ ಗಾಂಧಿ ಸಭಾಂಗಣದಲ್ಲಿ ನಡೆದ ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಭೆಯಲ್ಲಿ ಐದು ಇಲಾಖೆಗಳ ತಾಲೂಕು ಮಟ್ಟದ ಅಧಿಕಾರಿಗಳು ಭಾಗವಹಿಸಿ ಯೋಜನೆಗಳ ಅನುಷ್ಠಾನ ಕುರಿತು ಮಾಹಿತಿ ನೀಡಿದರು.

ಗೃಹಲಕ್ಷ್ಮಿ ಯೋಜನೆ ಕುರಿತು ಮಾಹಿತಿ ನೀಡಿದ ಸಿಡಿಪಿಒ ಬೋರೇಗೌಡ, ತಾಲೂಕಿನಲ್ಲಿ 40,569 ಕುಟುಂಬಗಳಿದ್ದು, ಅದರಲ್ಲಿ 40,490 ಕುಟುಂಬಗಳು ನೋಂದಣಿಯಾಗಿವೆ. ಇನ್ನೂ 79 ಕುಟುಂಬಗಳ ನೋಂದಣಿ ಬಾಕಿಯಿದೆ ಎಂದು ತಿಳಿಸಿದರು.

ನಂತರ ಮಾತನಾಡಿದ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ ಅಧಿಕಾರಿ ಸಂತೋಷ್, ಶಕ್ತಿ ಯೋಜನೆ ಆರಂಭವಾದ ಬಳಿಕ ತಾಲೂಕಿನಲ್ಲಿ 7,51,902 ಮಕ್ಕಳು ಹಾಗೂ 1,57,74,338 ವಯಸ್ಕರು ಪ್ರಯಾಣಿಸಿದ್ದು, ಒಟ್ಟು 66,38,14,092 ರೂಪಾಯಿ ಆದಾಯ ಬಂದಿದೆ ಎಂದು ಮಾಹಿತಿ ನೀಡಿದರು.



ಕೆಇಬಿ ಅಧಿಕಾರಿಗಳು ಮಾತನಾಡಿ, ತಾಲೂಕಿನಲ್ಲಿ 45,618 ಇನ್‌ಸ್ಟಾಲ್‌ಗಳಿದ್ದು, 43,498 ಕುಟುಂಬಗಳು ಗೃಹಜ್ಯೋತಿ ಯೋಜನೆಯ ಸಬ್ಸಿಡಿ ಪಡೆದಿವೆ ಎಂದು ತಿಳಿಸಿದರು.

ಯುವನಿಧಿ ಅಧಿಕಾರಿ ವೆಂಕಟೇಶ್ ಮಾತನಾಡಿ, ತಾಲೂಕಿನಲ್ಲಿ 2,039 ಅಭ್ಯರ್ಥಿಗಳು ಯೋಜನೆಗೆ ನೋಂದಾಯಿಸಿಕೊಂಡಿದ್ದು, 14 ಅಭ್ಯರ್ಥಿಗಳು ಹೊರಗುಳಿದಿದ್ದಾರೆ ಎಂದರು. ಇದೇ ತಿಂಗಳ 18ರಂದು ಸರ್ಕಾರಿ ಡಿಗ್ರಿ ಕಾಲೇಜಿನಲ್ಲಿ ಯುವನಿಧಿ ಯೋಜನೆಯ ವ್ಯಾಪಕ ಪ್ರಚಾರಕ್ಕಾಗಿ ಹಾಗೂ ವಿದ್ಯಾರ್ಥಿಗಳನ್ನು ಯೋಜನೆ ವ್ಯಾಪ್ತಿಗೆ ತರಲು ಕಾರ್ಯಕ್ರಮ ಆಯೋಜಿಸಲಾಗುವುದು ಎಂದು ತಿಳಿಸಿದರು.

ಆಹಾರ ಇಲಾಖೆಯ ಅಧಿಕಾರಿ ಮಮತಾ ಹಿರೇಮಠ್ ಅನ್ನಭಾಗ್ಯ ಯೋಜನೆ ಕುರಿತು ಸಮಗ್ರ ಮಾಹಿತಿ ನೀಡಿದರು.

ಸಭೆಯಲ್ಲಿ ಗ್ಯಾರಂಟಿ ಪ್ರಾಧಿಕಾರದ ಜಿಲ್ಲಾ ಉಪಾಧ್ಯಕ್ಷ ಜಂದಿಸಾಹೇಬ್, ಜಿಲ್ಲಾ ಗ್ಯಾರಂಟಿ ಪ್ರಾಧಿಕಾರದ ಸದಸ್ಯ ಪರಶುರಾಮ್ ಹೆಗ್ಡಳ್, ತಾಲೂಕು ಸಮಿತಿ ಸದಸ್ಯರಾದ ರಾಘು ಉಲವತ್ತಿ, ಮೇಟಿ ಮಂಜುನಾಥ್, ತಂಬ್ರಳ್ಳಿ ಗಿರೀಶ್, ವೆಂಕಟೇಶ್ ನಾಯ್ಕ್, ಕಾರ್ತಿಕ ಉಪ್ಪಾರ್, ಸರ್ದಾರ್ ರಾಮಣ್ಣ, ಪ್ರಕಾಶ್ ಉಪ್ಪಾರ್, ನಾಗಮ್ಮ, ಸುಧಾ, ಎಸ್.ಎ. ಸಂತೋಷ್, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಪಾಲಯ್ಯನ ಕೋಟೆ ವಿಶ್ವನಾಥ್, ತಾಲೂಕು ಯೋಜನಾಧಿಕಾರಿ ನಾಗರಾಜ್ ನಾಯ್ಕ್, ಲಕ್ಷ್ಮಿ ಮೇಡಮ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಮುಳಗುಂದದಲ್ಲಿ ಸಾಹಿತಿ ಸುಧಾ ಹುಚ್ಚಣ್ಣವರ ಕೃತಿ ಲೋಕಾರ್ಪಣೆ

# ಹೇಮರೆಡ್ಡಿ ಮಲ್ಲಮ್ಮ ಬದುಕಿನ ಮೌಲ್ಯ ಬಿಂಬಿಸಿದ 'ಸ್ತ್ರೀ ಸಂವೇದನೆಯ ಅಸ್ಮಿತೆ'

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣದ ಎಂ. ಡಿ. ಬಟ್ಟೂರ ಅವರ ಮಹಾಮನೆಯ ಆವರಣದಲ್ಲಿ ನಡೆದ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಸಾಹಿತಿ ಸುಧಾ ಹುಚ್ಚಣ್ಣವರ ರಚಿಸಿದ 'ಸ್ತ್ರೀ ಸಂವೇದನೆಯ ಅಸ್ಮಿತೆ ಮೌಲ್ಯಗಳ ಮಹಾಬೆಳಕು ಹೇಮರೆಡ್ಡಿ ಮಲ್ಲಮ್ಮ' ಕೃತಿ ಲೋಕಾರ್ಪಣೆಗೊಂಡಿತು.

ಹೇಮರೆಡ್ಡಿ ಮಲ್ಲಮ್ಮ ರೆಡ್ಡಿ ಸಂಘ, ಶರಣ ಸಾಹಿತ್ಯ ಪರಿಷತ್ತು, ಕದಳಿ ಮಹಿಳಾ ವೇದಿಕೆ ಹಾಗೂ ಅವ್ವ ಟ್ರಸ್ಟ್ ಸಹಯೋಗದಲ್ಲಿ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಕಾರ್ಯಕ್ರಮದ ಸಾನಿಧ್ಯ ವಹಿಸಿದ್ದ ಮಲ್ಲಿಕಾರ್ಜುನ ಸ್ವಾಮಿಗಳು ಕೃತಿ ಲೋಕಾರ್ಪಣೆಗೊಳಿಸಿ ಮಾತನಾಡಿ, ಹೇಮರೆಡ್ಡಿ ಮಲ್ಲಮ್ಮನ ಬದುಕಿನ ಮೌಲ್ಯಗಳು ಇಂದಿನ ಯುವ ಪೀಳಿಗೆಗೆ ದಾರಿದೀಪವಾಗಿವೆ. ಸಹನೆ, ತ್ಯಾಗ, ತಾಳ್ಮೆ, ಪ್ರಾಮಾಣಿಕತೆ, ಶಿಸ್ತು, ಕಾಯಕನಿಷ್ಠೆ ಮತ್ತು ದಾಸೋಹದ ಬದುಕಿನ ಮೂಲಕ ಮಲ್ಲಮ್ಮ ಇಡೀ ಸಮಾಜಕ್ಕೆ ಆದರ್ಶವಾಗಿದ್ದಾರೆ ಎಂದು ಹೇಳಿದರು.



ಕೃತಿಯು ಹೇಮರೆಡ್ಡಿ ಮಲ್ಲಮ್ಮನ ಮೌಲ್ಯಾಧಾರಿತ ಬದುಕನ್ನು ಅರ್ಥಪೂರ್ಣವಾಗಿ ಕಟ್ಟಿಕೊಟ್ಟಿದ್ದು, ಮಹಿಳೆ ಬದುಕಿನ ಮಹಾಶಕ್ತಿ ಎಂಬ ತತ್ವವನ್ನು ಪರಿಣಾಮಕಾರಿಯಾಗಿ ಸಾರಿದೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಎಂ. ಡಿ. ಬಟ್ಟೂರ ಮಾತನಾಡಿ, ಮಾನವಕುಲದ ಆದರ್ಶ ಮೌಲ್ಯಗಳನ್ನು ಬಿತ್ತರಿಸಿದ ಮಹಾ ಸಾಧ್ವಿ ಹೇಮರೆಡ್ಡಿ ಮಲ್ಲಮ್ಮ ಮಹಿಳಾ ಸಂಕುಲಕ್ಕೆ ಬದುಕಿನ ಸಾರ್ಥಕತೆಯನ್ನು ತೋರಿದ್ದಾರೆ ಎಂದರು.

ಮಹಿಳೆ ಕುಟುಂಬ ಮತ್ತು ಸಮಾಜದ ಮಹಾಶಕ್ತಿಯಾಗಿ ಬದುಕಿದಾಗ ಮುಂದಿನ ಪೀಳಿಗೆ ಸಂಸ್ಕಾರವಂತವಾಗುತ್ತದೆ ಎಂಬ ಅಮೂಲ್ಯ ಸಂದೇಶವನ್ನು ಈ ಕೃತಿ ಒಳಗೊಂಡಿದೆ. ಲೇಖಕಿ ಸುಧಾ ಹುಚ್ಚಣ್ಣವರ ಅವರಿಗೆ ಅಭಿನಂದನೆ ಸಲ್ಲಿಸುವುದಾಗಿ ಹೇಳಿದರು.

ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದ ಲೇಖಕಿ ಸುಧಾ ಹುಚ್ಚಣ್ಣವರ ಮಾತನಾಡಿ, ಸ್ತ್ರೀ ತಾಯಿಯಾಗಿ, ಸಹೋದರಿಯಾಗಿ, ಅರ್ಧಾಂಗಿಯಾಗಿ ಮತ್ತು ಮಗಳಾಗಿ ಜೀವನದ ಎಲ್ಲ ಆಯಾಮಗಳಲ್ಲಿ ತನ್ನದೇ ಆದ ಛಾಪು ಮೂಡಿಸಿದ್ದಾಳೆ. ಆದರೆ ಇಂದಿಗೂ ಸ್ತ್ರೀ ಸಂವೇದನೆಗೆ ಸಂಪೂರ್ಣ ಅಸ್ಮಿತೆ ದೊರೆತಿಲ್ಲ. ಹೇಮರೆಡ್ಡಿ ಮಲ್ಲಮ್ಮನ ಬದುಕಿನ ಮೌಲ್ಯಗಳು ಇಡೀ ಮಹಿಳಾ ಕುಲಕ್ಕೆ ಆದರ್ಶಪ್ರಾಯವಾಗಿವೆ ಎಂದು ಹೇಳಿದರು.

> "ಹೇಮರೆಡ್ಡಿ ಮಲ್ಲಮ್ಮನ ಬದುಕಿನ ಮೌಲ್ಯಗಳು ಇಂದಿನ ಯುವ ಪೀಳಿಗೆಗೆ ಮಾರ್ಗದರ್ಶಿಯಾಗಿವೆ."
> **– ಮಲ್ಲಿಕಾರ್ಜುನ ಸ್ವಾಮಿಗಳು**

ಕಾರ್ಯಕ್ರಮದಲ್ಲಿ ಕೆ. ಎ. ಬಳಿಗೆ ಉಪನ್ಯಾಸ ನೀಡಿದರು. ಇದೇ ವೇಳೆ ಶಂಕ್ರಪ್ಪ ಗೊರವರ, ಮಲ್ಲಮ್ಮ ಬಟ್ಟೂರ, ರಾಮಣ್ಣ ಕಾಮಾಜಿ, ಡಾ. ಎಸ್. ಸಿ. ಚವಡಿ, ಬಸವರಾಜ ಸುಂಕಾಪುರ, ವಿಜಯ ನೀಲಗುಂದ, ಕೆ. ಎ. ಕರಿಗೌಡ್ರ, ಜಗದೀಶ್ ಬಟ್ಟೂರ, ಮಂಜುನಾಥ್ ಬಟ್ಟೂರ, ಚಂದ್ರು ಬಟ್ಟೂರ, ಮಂಜುನಾಥ್ ಮಟ್ಟಿ, ರಾಜೇಶ್ವರಿ ಬಡ್ನಿ ಹಾಗೂ ವಿ. ಕೆ. ಸಿದ್ದನಗೌಡರ ಉಪಸ್ಥಿತರಿದ್ದರು.

ಪ್ರಕಾಶ್ ಮದ್ದಿನ್ ಕಾರ್ಯಕ್ರಮ ನಿರೂಪಿಸಿದರು.

### "ಜಗ ಬೆಳಗಲು ಸೂರ್ಯ ಬೇಕು, ಬಾಳು ಬೆಳಗಲು ಗುರು ಬೇಕು"–ರಂಭಾಪುರಿ ಜಗದ್ಗುರು

# ಗುರುಬಲದಿಂದ ಬದುಕು ಸುಭದ್ರ

■ವಿಜಯಸಾಕ್ಷಿ ಸುದ್ದಿ, ರಾಣೆಬೆನ್ನೂರು

"ಜಗವನ್ನು ಬೆಳಗಲು ಸೂರ್ಯ ಬೇಕಾದರೆ, ಮಾನವನ ಬಾಳನ್ನು ಬೆಳಗಲು ಗುರು ಅಗತ್ಯ. ಗುರುಬಲದಿಂದಲೇ ಮನುಷ್ಯನ ಬದುಕು ಸುಭದ್ರಗೊಳ್ಳುತ್ತದೆ" ಎಂದು ಡಾ. ವೀರಸೋಮೇಶ್ವರ ಜಗದ್ಗುರು ಹೇಳಿದರು.

ತಾಲೂಕಿನ ಅರೇಮಲ್ಲಾಪುರ ಗ್ರಾಮದಲ್ಲಿ ನಡೆದ ಶ್ರೀ ವೀರಭದ್ರೇಶ್ವರ ದೇವಸ್ಥಾನದ ಗೋಪುರ ಕಳಸಾರೋಹಣ, ಕಲ್ಮೇಶ್ವರ ದೇವರ ಮರುಪ್ರಾಣ ಪ್ರತಿಷ್ಠಾಪನೆ ಹಾಗೂ ಸಾಮೂಹಿಕ ವಿವಾಹ ಸಮಾರಂಭದ ಅಂಗವಾಗಿ ಆಯೋಜಿಸಿದ್ದ ಜನಜಾಗೃತಿ ಧರ್ಮ ಸಮಾರಂಭದಲ್ಲಿ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.



"ಬ್ರಹ್ಮ ಸೃಷ್ಟಿ ಮಾಡಬಲ್ಲ, ವಿಷ್ಣು ಸಂರಕ್ಷಿಸಬಲ್ಲ, ಮಹೇಶ್ವರ ದುಷ್ಟಶಕ್ತಿ ನಾಶ ಮಾಡಬಲ್ಲ. ಈ ಮೂರೂ ಗುಣಗಳು ಗುರುವಿನಲ್ಲಿ ಅಡಕವಾಗಿವೆ. ಗುರುವಿನ ಕರುಣೆಯಿಂದ ಬದುಕು ಉಜ್ವಲವಾಗುತ್ತದೆ" ಎಂದು ಹೇಳಿದರು. ಅರೇಮಲ್ಲಾಪುರ ಗ್ರಾಮದ ಜನರ ಭಕ್ತಿ–ಶ್ರದ್ಧೆಯನ್ನು ಅವರು ಶ್ಲಾಘಿಸಿದರು.

ಸಾನ್ನಿಧ್ಯ ವಹಿಸಿದ್ದ ಸಿದ್ಧಲಿಂಗ ಜಗದ್ಗುರು ಮಾತನಾಡಿ, ರೈತರು ಹಾಗೂ ದೇಶ ಕಾಯುವ ಯೋಧರ ಸೇವೆಯನ್ನು ಎಲ್ಲರೂ ಗೌರವಿಸಬೇಕು ಎಂದು ಕರೆ ನೀಡಿದರು. ಉತ್ತಮ ಮಳೆ, ಬೆಳೆ ದೊರೆಯಲಿ ಹಾಗೂ ಜನರಿಗೆ ಸುಖ–ಶಾಂತಿ ನೆಲೆಸಲಿ ಎಂದು ಆಶೀರ್ವದಿಸಿದರು.

> "ವಿಜ್ಞಾನ–ತಂತ್ರಜ್ಞಾನ ಯುಗದಲ್ಲಿ ಜೀವನ ಮೌಲ್ಯಗಳ ಉಳಿವಿಗೆ ಆಧ್ಯಾತ್ಮಿಕ ಆದರ್ಶಗಳ ಪಾಲನೆ ಅಗತ್ಯ"
> **– ಡಾ. ವಿಶ್ವಾರಾಧ್ಯ ಮಲ್ಲಿಕಾರ್ಜುನ ಜಗದ್ಗುರು**

ಡಾ. ಚನ್ನಸಿದ್ಧರಾಮ ಪಂಡಿತಾರಾಧ್ಯ ಜಗದ್ಗುರು ಮಾತನಾಡಿ, "ಜಾತಿಗಿಂತ ನೀತಿ ಶ್ರೇಷ್ಠ. ಗುರು ಎಲ್ಲರನ್ನು ಸಮಾನ ಮನೋಭಾವದಿಂದ ಕಾಣುತ್ತಾನೆ" ಎಂದರು.

ಡಾ. ಚಂದ್ರಶೇಖರ ಜಗದ್ಗುರು ವೀರಶೈವ ಧರ್ಮದ ಪಂಚಸೂತ್ರಗಳ ಮಹತ್ವವನ್ನು ವಿವರಿಸಿ, ಜೀವನ ವಿಕಾಸಕ್ಕೆ ಆಧ್ಯಾತ್ಮಿಕ ಅರಿವು ಅಗತ್ಯ ಎಂದು ತಿಳಿಸಿದರು.

ಕಾರ್ಯಕ್ರಮವನ್ನು ಉದ್ಘಾಟಿಸಿದ ಪ್ರಕಾಶ ಕೋಳಿವಾಡ, ಪಂಚಪೀಠಾಧೀಶ್ವರರ ಅಡ್ಡಪಲ್ಲಕ್ಕಿ ಮಹೋತ್ಸವ ಗ್ರಾಮದಲ್ಲಿ ನಡೆದಿರುವುದು ಇಲ್ಲಿನ ಜನರ ಸೌಭಾಗ್ಯ ಎಂದು ಹೇಳಿದರು.

ಮಾಜಿ ಶಾಸಕರಾದ ಅರುಣಕುಮಾರ ಪೂಜಾರ, ವಿರೂಪಾಕ್ಷಪ್ಪ ಬಳ್ಳಾರಿ ಹಾಗೂ ಹಿರಿಯ ನ್ಯಾಯವಾದಿ ಪಿ.ಆರ್. ಕುಪ್ಪೇಲೂರ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು.

ನೆಗಳೂರು ಹಿರೇಮಠದ ಗುರುಶಾಂತೇಶ್ವರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಭೌತಿಕ ಸಂಪತ್ತಿಗಿಂತ ಆಧ್ಯಾತ್ಮಿಕ ಜ್ಞಾನವೇ ಶಾಶ್ವತ ಸಂಪತ್ತು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ವಿವಿಧ ಮಠಗಳ ಶ್ರೀಗಳು ಭಾಗವಹಿಸಿ ಸಮಾರಂಭದ ಘನತೆ ಹೆಚ್ಚಿಸಿದರು. ಕೆ.ಸಿ. ನಾಗರಾಜ್ ತಂಡದಿಂದ ಸಂಗೀತ ಕಾರ್ಯಕ್ರಮ ನಡೆಯಿತು. ದಿಯಾ ಹೆಗಡೆ ವಿಶೇಷ ಆಹ್ವಾನಿತರಾಗಿ ಪಾಲ್ಗೊಂಡಿದ್ದರು.

ಇದಕ್ಕೂ ಮುನ್ನ ಗ್ರಾಮದಲ್ಲಿ ಪಂಚಪೀಠಾಧೀಶ್ವರರ ಅಡ್ಡಪಲ್ಲಕ್ಕಿ ಮಹೋತ್ಸವ ಭಕ್ತಿಭಾವದಿಂದ ಜರುಗಿತು. ಸಹಸ್ರಾರು ಭಕ್ತರು ಭಾಗವಹಿಸಿ ಪುನೀತರಾದರು.

### "ತಾಯಿ ಮೊದಲ ಗುರು, ಮೊದಲ ಮಾರ್ಗದರ್ಶಿ ಮತ್ತು ಮೊದಲ ಗೆಳತಿ" – ಬ್ರಹ್ಮಕುಮಾರಿ ಜಯಂತಿ ಅಕ್ಕ

# ತಾಯಿ ಸುಖಿ ಕುಟುಂಬದ ಅಡಿಪಾಯ

■ವಿಜಯಸಾಕ್ಷಿ ಸುದ್ದಿ, ಗದಗ

ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವ ವಿದ್ಯಾಲಯ ವತಿಯಿಂದ 'ತಾಯಿ – ಸುಖೀ ಕುಟುಂಬದ ಅಡಿಪಾಯ' ಎಂಬ ಧ್ಯೇಯವಾಕ್ಯದಡಿ ತಾಯಂದಿರ ದಿನಾಚರಣೆ ಕಾರ್ಯಕ್ರಮವನ್ನು ಭಕ್ತಿಭಾವ ಹಾಗೂ ಸಂಭ್ರಮದಿಂದ ಆಚರಿಸಲಾಯಿತು.

ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಗದಗ ಈಶ್ವರೀಯ ವಿಶ್ವ ವಿದ್ಯಾಲಯದ ಸಂಚಾಲಕರಾದ ಬ್ರಹ್ಮಕುಮಾರಿ ಜಯಂತಿ ಅಕ್ಕ, "ತಾಯಿ ಮೊದಲ ಗುರು, ಮೊದಲ ಮಾರ್ಗದರ್ಶಿ ಮತ್ತು ಮೊದಲ ಗೆಳತಿ. ಅವಳು ಬೇಷರತ್ತಾದ ಪ್ರೀತಿಯಿಂದ ಪೋಷಿಸುತ್ತಾಳೆ, ರಕ್ಷಿಸುತ್ತಾಳೆ ಮತ್ತು ಸಬಲೀಕರಣಗೊಳಿಸುತ್ತಾಳೆ. ಪ್ರತಿಯೊಂದು ಕನಸಿನ ಹಿಂದಿನ ಶಕ್ತಿ ಹಾಗೂ ಪ್ರತಿ ಹೃದಯ ಬಡಿತದಲ್ಲಿನ ಶಾಂತಿಯೇ ತಾಯಿ" ಎಂದು ಹೇಳಿದರು.



ಮುಂದುವರಿದು ಮಾತನಾಡಿದ ಅವರು, "ತ್ಯಾಗ, ಕರುಣೆ, ದಯೆ, ತಾಳ್ಮೆ, ಪ್ರೀತಿ ಮತ್ತು ಸಹನೆ ಇರುವೆಡೆ ತಾಯಿಯ ಹೃದಯವಿರುತ್ತದೆ. ಇಂತಹ ಮೌಲ್ಯಗಳನ್ನು ಸಮಾಜದಲ್ಲಿ ಜಾಗೃತಗೊಳಿಸುವ ಉದ್ದೇಶದಿಂದ ರಾಜಯೋಗ ತರಬೇತಿ ಶಿಬಿರವನ್ನು ಆಯೋಜಿಸಲಾಗಿದೆ. ಸರ್ವರೂ ಇದರ ಪ್ರಯೋಜನ ಪಡೆಯಬೇಕು" ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಪಾಲ್ಗೊಂಡ ಎಲ್ಲಾ ತಾಯಂದಿರನ್ನು ಸನ್ಮಾನಿಸಿ, 'ಮನಸ್ಸು ಸುಂದರವಾಗಲಿ ಮನೆ ಮಂದಿರವಾಗಲಿ' ಎನ್ನುವ ಸೂತ್ರಗಳ ಪ್ರತಿಯನ್ನು ಉಡುಗೊರೆಯಾಗಿ ನೀಡಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಬಿಇಒ ಕಚೇರಿಯ ಶ್ರೀಮತಿ ಕವಿತಾ ದಂಡಿನ್, ಚೇಂಬರ್ ಆಫ್ ಕಾಮರ್ಸ್ ಮಹಿಳಾ ಘಟಕದ ಅಧ್ಯಕ್ಷೆ ಶ್ರೀಮತಿ ಜ್ಯೋತಿ ದಾನಪ್ಪಗೌಡರ, ಖಜಾಂಚಿ ಶ್ರೀಮತಿ ರೇಣುಕಾ ಅಮಾತ್ಯ, ಕಾರ್ಯದರ್ಶಿ ಶ್ರೀಮತಿ ಸುಧಾ ಹುಣಸಿಕಟ್ಟಿ, ಶಿಕ್ಷಕಿಯರಾದ ಶ್ರೀಮತಿ ವೈಭವಿ ಕೊಪ್ಪರ್, ಶ್ರೀಮತಿ ಮಹಾಲಕ್ಷ್ಮಿ ಚಳಗೇರಿ ಸೇರಿದಂತೆ ಅನೇಕ ಮಹಿಳೆಯರು ಭಾಗವಹಿಸಿ ತಮ್ಮ ಅನುಭವ ಹಂಚಿಕೊಂಡರು.

ಬ್ರಹ್ಮಕುಮಾರಿ ರೇಖಾ ಅಕ್ಕ ಸ್ವಾಗತಿಸಿದರು.

ಕೆ.ಎಸ್.ಸಿ.ಎ ಅಂತರ ಕ್ಲಬ್ ಕ್ರಿಕೆಟ್ ಟೂರ್ನಿಯಲ್ಲಿ ಜಾನೋಪಂತರ ಅಕಾಡೆಮಿಗೆ ಶುಭಾರಂಭ

## ಆದರ್ಶ ಜಿಂದೆ ಶತಕ; ಗದಗ ತಂಡಕ್ಕೆ ಭರ್ಜರಿ ಜಯ





■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಜಾನೋಪಂತರ ಕ್ರಿಕೆಟ್ ಅಕಾಡೆಮಿಯ 19 ವರ್ಷದೊಳಗಿನ ತಂಡವು ಕೆ.ಎಸ್.ಸಿ.ಎ ಆಶ್ರಯದಲ್ಲಿ ನಡೆಯುತ್ತಿರುವ ಅಂತರ ಕ್ಲಬ್ ಕ್ರಿಕೆಟ್ ಲೀಗ್ ಕಮ್ ನಾಕೌಟ್ ಟೂರ್ನಿಯಲ್ಲಿ ಭರ್ಜರಿ ಗೆಲುವಿನೊಂದಿಗೆ ಶುಭಾರಂಭ ಮಾಡಿತು.

ಹುಬ್ಬಳ್ಳಿಯ ರೈಲ್ವೆ ಕ್ರೀಡಾಂಗಣದಲ್ಲಿ ನಡೆದ ಪಂದ್ಯದಲ್ಲಿ ಗದಗ ತಂಡವು ಬೆಳಗಾವಿ ಸ್ಪೋರ್ಟ್ಸ್ ಕ್ಲಬ್ ತಂಡವನ್ನು 8 ವಿಕೆಟ್‌ಗಳಿಂದ ಮಣಿಸಿತು.

ಮೊದಲು ಬ್ಯಾಟಿಂಗ್ ಮಾಡಿದ ಬೆಳಗಾವಿ ತಂಡ ಗದಗ ತಂಡದ ಬೌಲರ್‌ಗಳ ದಾಳಿಗೆ ತತ್ತರಿಸಿತು. ಎಡಗೈ ಸ್ಪಿನ್ನರ್ ನಿಶಾಂತ ಗೊಳಸಂಗಿ 32 ರನ್ ನೀಡಿ 5 ವಿಕೆಟ್ ಕಬಳಿಸಿ ಮಿಂಚಿದರೆ, ಎಡಗೈ ವೇಗಿ ನಿತಿನ್ ಬದಿ 25 ರನ್ ನೀಡಿ 3 ವಿಕೆಟ್ ಪಡೆದು ಉತ್ತಮ ಬೆಂಬಲ ನೀಡಿದರು. ಸಮರ್ಥ ನುಗ್ಗಿಕೇರಿ ಎರಡು ವಿಕೆಟ್ ಪಡೆದರು. ಪರಿಣಾಮ ಬೆಳಗಾವಿ ತಂಡ 148 ರನ್‌ಗಳಿಗೆ ಆಲೌಟ್ ಆಯಿತು.

ನಂತರ 149 ರನ್‌ಗಳ ಗುರಿ ಬೆನ್ನಟ್ಟಿದ ಗದಗ ತಂಡದ ನಾಯಕ ಆದರ್ಶ ಜಿಂದೆ ಅಜೇಯ 105 ರನ್‌ಗಳ ಶತಕ ಸಿಡಿಸಿ ತಂಡದ ಗೆಲುವಿನ ರೂವಾರಿಯಾದರು. ಅವರ ಆಟದಲ್ಲಿ 14 ಬೌಂಡರಿ ಹಾಗೂ 3 ಸಿಕ್ಸರ್ ಸೇರಿದ್ದವು. ಮತ್ತೊಂದು ತುದಿಯಲ್ಲಿ ಚಿನ್ಮಯ ಹಿರೇಮಠ 30 ರನ್‌ಗಳೊಂದಿಗೆ ಉತ್ತಮ ಬೆಂಬಲ ನೀಡಿದರು.

ಗದಗ ತಂಡವು 34ನೇ ಓವರ್‌ನಲ್ಲಿ ಕೇವಲ 2 ವಿಕೆಟ್ ಕಳೆದುಕೊಂಡು 151 ರನ್ ಗಳಿಸಿ ಸುಲಭ ಜಯ ಸಾಧಿಸಿತು. ಅಜೇಯ ಶತಕ ಬಾರಿಸಿದ ಆದರ್ಶ ಜಿಂದೆ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

"ಪ್ರತಿ ಗ್ರಾಮಕ್ಕೆ ದಿನಕ್ಕೆ ಎರಡು ಬಾರಿ ಭೇಟಿ ನೀಡಿ ನೀರು ಸರಬರಾಜು ಪರಿಶೀಲಿಸಿ" : ಚಂದ್ರಶೇಖರ ಬಿ ಕಂದಕೂರ

# ರೋಣದಲ್ಲಿ ಕುಡಿಯುವ ನೀರಿಗೆ ತುರ್ತು ನಿಗಾ!

■ವಿಜಯಸಾಕ್ಷಿ ಸುದ್ದಿ, ರೋಣ

ರಾಜ್ಯಾದ್ಯಂತ ಬಿಸಿಲಿನ ತಾಪಮಾನ ದಿನದಿಂದ ದಿನಕ್ಕೆ ಏರಿಕೆಯಾಗುತ್ತಿರುವ ಹಿನ್ನೆಲೆಯಲ್ಲಿ ರೋಣ ತಾಲೂಕಿನ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉಲ್ಬಣವಾಗದಂತೆ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳುವಂತೆ ರೋಣ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳಾದ ಚಂದ್ರಶೇಖರ ಬಿ ಕಂದಕೂರ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ತಾಲೂಕು ಪಂಚಾಯಿತಿ ಸಭಾಭವನದಲ್ಲಿ ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ವಾಟರ್‌ಮೆನ್‌ಗಳು, ನರೇಗಾ ಸಿಬ್ಬಂದಿ ಹಾಗೂ ತಾಲೂಕು ಪಂಚಾಯಿತಿ ಸಿಬ್ಬಂದಿಯೊಂದಿಗೆ ವಿವಿಧ ವಿಷಯಗಳ ಕುರಿತು ಸಮಗ್ರ ಚರ್ಚೆ ನಡೆಸಿದರು.

ಸಭೆಯಲ್ಲಿ ಮಾತನಾಡಿದ ಅವರು, "ಬೇಸಿಗೆ ಸಂದರ್ಭದಲ್ಲಿ ಕುಡಿಯುವ ನೀರಿನ ಸಮಸ್ಯೆ ಗಂಭೀರ ಸ್ವರೂಪ ಪಡೆಯುವ ಸಾಧ್ಯತೆ ಇದೆ. ಆದ್ದರಿಂದ ಪ್ರತಿಯೊಬ್ಬ ಅಧಿಕಾರಿಯೂ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು" ಎಂದು ಸೂಚಿಸಿದರು.

ಡಿಬಿಓಟಿ ನೀರು ಪೂರೈಕೆಯಲ್ಲಿ ಯಾವುದೇ ವ್ಯತ್ಯಯ ಉಂಟಾಗದಂತೆ ಪಿಡಿಓಗಳು ನಿರಂತರ ನಿಗಾ ವಹಿಸಬೇಕು. ಪ್ರತಿದಿನ ಮುಂಜಾನೆ ಹಾಗೂ ಸಂಜೆ ಗ್ರಾಮಗಳಿಗೆ ಭೇಟಿ ನೀಡಿ ನೀರು



> "ಬೋರ್‌ವೆಲ್ ನೀರಿನ ಮಟ್ಟ ಕುಸಿತ, ಮೋಟಾರ್ ದೋಷ ಸೇರಿದಂತೆ ನೀರು ಸರಬರಾಜು ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸಿ"
>
> – ಚಂದ್ರಶೇಖರ ಬಿ ಕಂದಕೂರ

ಸರಬರಾಜು ವ್ಯವಸ್ಥೆಯನ್ನು ಪರಿಶೀಲಿಸಬೇಕು. ಗ್ರಾಮಗಳಲ್ಲಿ ನೀರಿನ ಸಮಸ್ಯೆ ಕಂಡುಬಂದ ತಕ್ಷಣ ಪರ್ಯಾಯ ವ್ಯವಸ್ಥೆ ಕಲ್ಪಿಸಿ ಸಾರ್ವಜನಿಕರಿಗೆ ತೊಂದರೆ ಆಗದಂತೆ ನೋಡಿಕೊಳ್ಳಬೇಕು ಎಂದು ನಿರ್ದೇಶನ ನೀಡಿದರು.

ನೀರು ಸರಬರಾಜಿನಲ್ಲಿ ನಿರ್ಲಕ್ಷ್ಯ ಕಂಡುಬಂದರೆ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಬಾಕಿ ಉಳಿದಿರುವ ಕಾಮಗಾರಿಗಳನ್ನು ಶೀಘ್ರ ಪೂರ್ಣಗೊಳಿಸಿ ಗ್ರಾಮೀಣ ಜನರಿಗೆ ಶುದ್ಧ ಕುಡಿಯುವ ನೀರು ಒದಗಿಸುವ ಕಾರ್ಯಕ್ಕೆ ವೇಗ ನೀಡಬೇಕು. ಕಾಮಗಾರಿಗಳ ಗುಣಮಟ್ಟ ಕಾಪಾಡಿಕೊಂಡು ಯೋಜನೆಯ ಲಾಭ ಪ್ರತಿಯೊಂದು ಮನೆಗೂ ತಲುಪುವಂತೆ ಅಧಿಕಾರಿಗಳು ಕಾರ್ಯನಿರ್ವಹಿಸಬೇಕು ಎಂದು ತಿಳಿಸಿದರು.

ಸಭೆಯಲ್ಲಿ ನರೇಗಾ ಯೋಜನೆಯಡಿ ಕೈಗೊಳ್ಳಲಾಗುತ್ತಿರುವ ಅಭಿವೃದ್ಧಿ ಕಾಮಗಾರಿಗಳು, ಉದ್ಯೋಗ ಸೃಷ್ಟಿ, ಕೆರೆ ಅಭಿವೃದ್ಧಿ, ನೀರು ಸಂರಕ್ಷಣೆ ಸೇರಿದಂತೆ ವಿವಿಧ ಯೋಜನೆಗಳ ಅನುಷ್ಠಾನದ ಕುರಿತು ಚರ್ಚೆ ನಡೆಯಿತು. ಗ್ರಾಮ ಪಂಚಾಯಿತಿಗಳಲ್ಲಿ ಬಾಕಿ ಉಳಿದಿರುವ ಅಭಿವೃದ್ಧಿ ಕಾಮಗಾರಿಗಳನ್ನು ಗಡುವಿನೊಳಗೆ ಪೂರ್ಣಗೊಳಿಸುವಂತೆ ಸೂಚನೆ ನೀಡಲಾಯಿತು.

ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉಲ್ಬಣವಾಗದಂತೆ ಎಲ್ಲಾ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಿ ಸಾರ್ವಜನಿಕರ ಸಮಸ್ಯೆಗೆ ತ್ವರಿತ ಸ್ಪಂದನೆ ನೀಡಬೇಕು ಎಂದು ಕಾರ್ಯನಿರ್ವಾಹಕ ಅಧಿಕಾರಿಗಳು ತಿಳಿಸಿದರು.

ಸಭೆಯಲ್ಲಿ ವಿವಿಧ ಗ್ರಾಮ ಪಂಚಾಯಿತಿಗಳ ಸಮಸ್ಯೆಗಳು ಹಾಗೂ ಅಭಿವೃದ್ಧಿ ಕಾಮಗಾರಿಗಳ ಕುರಿತು ಅಧಿಕಾರಿಗಳು ಮಾಹಿತಿ ನೀಡಿದರು.



ವಿಶ್ವ ದಾದಿಯರ ದಿನಾಚರಣೆಯಲ್ಲಿ ಬ್ರಹ್ಮಕುಮಾರಿ ಜಯಂತಿ ಅಭಿಮತ

# ನರ್ಸಿಂಗ್ ವೃತ್ತಿಯಲ್ಲಿ ಮಾನವೀಯ ಮೌಲ್ಯಗಳು ಅತ್ಯಗತ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಮದರ್ ತೆರೇಸಾ ಇನ್ಸ್ಟಿಟ್ಯೂಟ್ ಆಫ್ ನರ್ಸಿಂಗ್ ಕಾಲೇಜುದಲ್ಲಿ ಈಶ್ವರೀಯ ವಿಶ್ವ ವಿದ್ಯಾಲಯ ವತಿಯಿಂದ ವಿಶ್ವ ದಾದಿಯರ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

'ನರ್ಸಿಂಗ್ ವೃತ್ತಿಯಲ್ಲಿ ಮಾನವೀಯ ಮೌಲ್ಯಗಳ ಮಹತ್ವ' ವಿಷಯದ ಕುರಿತು ಮಾತನಾಡಿದ ಗದುಗಿನ ಈಶ್ವರೀಯ ವಿಶ್ವ ವಿದ್ಯಾಲಯದ ಸಂಚಾಲಕರಾದ ರಾಜಯೋಗಿನಿ ಬ್ರಹ್ಮಕುಮಾರಿ ಜಯಂತಿ, ನರ್ಸಿಂಗ್ ವೃತ್ತಿಯು ಕೇವಲ ಉದ್ಯೋಗವಲ್ಲ, ಅದು ಮಾನವೀಯತೆ, ತ್ಯಾಗ ಮತ್ತು ಸೇವಾ ಮನೋಭಾವದ ಪ್ರತೀಕವಾಗಿದೆ ಎಂದು ಹೇಳಿದರು.

ಫ್ಲಾರೆನ್ಸ್ ನೈಟಿಂಗೇಲ್ ಅವರ ಜೀವನದ ಉದಾಹರಣೆಯನ್ನು



ಉಲ್ಲೇಖಿಸಿದ ಅವರು, ಯಾವುದೇ ಆಧುನಿಕ ಸೌಲಭ್ಯಗಳಿಲ್ಲದ ಕಾಲದಲ್ಲಿಯೇ ಯುದ್ಧಭೂಮಿಯಲ್ಲಿ ಗಾಯಗೊಂಡ ಸೈನಿಕರಿಗೆ ನಿಸ್ವಾರ್ಥ ಸೇವೆ ಸಲ್ಲಿಸುವ ಮೂಲಕ ಅವರು ಜಗತ್ತಿಗೆ ಮಾದರಿಯಾಗಿದ್ದಾರೆ ಎಂದು ತಿಳಿಸಿದರು. ಇಂತಹ ಸೇವಾ ಮನೋಭಾವವನ್ನು ಇಂದಿನ ದಾದಿಯರು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದು ಕರೆ ನೀಡಿದರು.

ಇಂದಿನ ದಿನಗಳಲ್ಲಿ ವೃತ್ತಿಯನ್ನು ಕೇವಲ ಆರ್ಥಿಕ ಲಾಭ ಅಥವಾ ಕುಟುಂಬ ನಿರ್ವಹಣೆಯ ದೃಷ್ಟಿಯಿಂದ ನೋಡುವ ಪ್ರವೃತ್ತಿ ಹೆಚ್ಚುತ್ತಿದೆ. ನರ್ಸಿಂಗ್ ವಿದ್ಯಾರ್ಥಿಗಳು ಅಂಕಗಳಿಗಾಗಿ ಮಾತ್ರವಲ್ಲದೆ, ರೋಗಿಗಳ ಸೇವೆಯ ನೈಜ ಉದ್ದೇಶದೊಂದಿಗೆ ಈ ಕ್ಷೇತ್ರಕ್ಕೆ ಬರಬೇಕು ಎಂದು ಹೇಳಿದರು.



ಧಾರವಾಡ: ಜಿಲ್ಲಾ ಪಂಚಾಯತ್ ಕಚೇರಿ ಎದುರಿನ ಅಕ್ಕಾ ಕೆಫೆಗೆ ಭೇಟಿ ನೀಡಿದ ಕಾರ್ಮಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಎಸ್. ಲಾಡ್ ಕಾಫಿ ಸ್ವೀಕರಿಸಿ, ಕೆಫೆ ಸಿಬ್ಬಂದಿಯನ್ನು ಪ್ರೋತ್ಸಾಹಿಸಿದರು.

"ಪಟ್ಟಣಶೆಟ್ಟಿ ಅವರದ್ದು ಶರಣತತ್ವ ನಿಷ್ಠ ಬರಹ ಮತ್ತು ಸಾಕಾರಾತ್ಮಕ ಚಿಂತನೆಯ ಬದುಕು"– ಡಾ. ವೀರಣ್ಣ ರಾಜೂರ

# ಬಸವತತ್ವ ನಿಷ್ಠ ಬದುಕಿನ ಸಾಹಿತಿ ಎಸ್.ವಿ.ಪಟ್ಟಣಶೆಟ್ಟಿ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಪ್ರೊ. ಎಸ್.ವಿ. ಪಟ್ಟಣಶೆಟ್ಟಿ ಅವರದ್ದು ಬಸವತತ್ವ ನಿಷ್ಠ ಬದುಕು ಹಾಗೂ ಶರಣತತ್ವ ನಿಷ್ಠ ಬರಹವಾಗಿದೆ ಎಂದು ಸಂಶೋಧಕ ಡಾ. ವೀರಣ್ಣ ರಾಜೂರ ಹೇಳಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಪ್ರೊ. ಎಸ್.ವಿ. ಪಟ್ಟಣಶೆಟ್ಟಿ ಅವರ ಕುಟುಂಬದವರು ನಗರದ ಶುಭೋದಯ ಕನ್ವೆನ್ಷನ್ ಹಾಲ್‌ನಲ್ಲಿ ಮಂಗಳವಾರ ಆಯೋಜಿಸಿದ್ದ ಸಾಹಿತಿ ಪ್ರೊ. ಎಸ್.ವಿ. ಪಟ್ಟಣಶೆಟ್ಟಿ ಅವರ 83ನೇ ಜನ್ಮದಿನ ಹಾಗೂ ಅವರು ರಚಿಸಿದ ಮೂರು ಕೃತಿಗಳ ಬಿಡುಗಡೆ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಶರಣರ ಬದುಕು ಸತ್ಯ ಹಾಗೂ ನಿಷ್ಠೆಯ ದಾರಿಯದ್ದಾಗಿದೆ. ಪಟ್ಟಣಶೆಟ್ಟಿ ಅವರು ರಚಿಸಿರುವ 'ಸಂಕ್ಷಿಪ್ತ ಕನ್ನಡ ಸಾಹಿತ್ಯ ಚರಿತ್ರೆ' ಕೃತಿ ವಿದ್ಯಾರ್ಥಿಗಳಿಗೆ ಕನ್ನಡ ಸಾಹಿತ್ಯ ಚರಿತ್ರೆ ತಿಳಿಯಲು ಸಹಕಾರಿಯಾಗಲಿದೆ ಎಂದು ಹೇಳಿದರು.

ಮುಂಡರಗಿಯ ಜಗದ್ಗುರು ತೋಂಟದಾರ್ಯ ಮಠದ ಶ್ರೀ ನಿಜಗುಣಪ್ರಭು ತೋಂಟದಾರ್ಯ



ಸ್ವಾಮೀಜಿ 'ವಚನ ಸುಧೆ', 'ತುಪ್ಪದ ತಲೆಯವರು' ಹಾಗೂ 'ಸಂಕ್ಷಿಪ್ತ ಕನ್ನಡ ಸಾಹಿತ್ಯ ಚರಿತ್ರೆ' ಕೃತಿಗಳನ್ನು ಬಿಡುಗಡೆಗೊಳಿಸಿ ಮಾತನಾಡಿದರು.

"ವೈಚಾರಿಕ ಮನಸ್ಸು ದೇಶ, ಸಮಾಜ ಹಾಗೂ ಧರ್ಮ ವಿರೋಧಿಯಲ್ಲ. ಭ್ರಮೆ ಮತ್ತು ಅಜ್ಞಾನದಲ್ಲಿ ಬದುಕುವವರಿಗೆ ವೈಚಾರಿಕತೆ ರುಚಿಸುವುದಿಲ್ಲ. ಸಮಾಜವನ್ನು ಸರಿದಾರಿಗೆ ತರುವ ಕಾರ್ಯವನ್ನು ಪಟ್ಟಣಶೆಟ್ಟಿ ಅವರು ತಮ್ಮ ಸಾಹಿತ್ಯ ಕೃಷಿಯ ಮೂಲಕ ಮಾಡಿದ್ದಾರೆ" ಎಂದು ಹೇಳಿದರು.

"ಬಸವಣ್ಣ ಹಾಗೂ ಶರಣರ ಚಿಂತನೆಗಳಿಂದ ದೂರ ಸರಿದ ಲಿಂಗಾಯತರು ಹೋಮ–ಹವನಗಳಿಗೆ ಸಿಲುಕಿ ಆತ್ಮವಂಚನೆಗೆ ಇಳಿದಿದ್ದಾರೆ. ಮುಂದಿನ ಪೀಳಿಗೆಗೆ ಉತ್ತಮ ಸಂದೇಶ ನೀಡಲು ಇಂತಹ ಕಾರ್ಯಕ್ರಮಗಳು ಅಗತ್ಯ" ಎಂದರು.

'ವಚನ ಸುಧೆ' ಕೃತಿಯ ಕುರಿತು ಲೆಕ್ಕಪರಿಶೋಧಕ ನಟರಾಜ ಮೂರಶಿಳ್ಳಿ ಹಾಗೂ 'ತುಪ್ಪದ ತಲೆಯವರು' ಕುರಿತು ಹಿರಿಯ ಪತ್ರಕರ್ತ ಮಲ್ಲಿಕಾರ್ಜುನ ಸಿದ್ಧಣ್ಣವರ ಮಾತನಾಡಿದರು.

ಪಟ್ಟಣಶೆಟ್ಟಿ ಅವರ ಪುತ್ರಿ ಡಾ. ಪೂರ್ಣಿಮಾ ಮಾತನಾಡಿ, "ತಂದೆಯವರಲ್ಲಿ ಜಾತಿ, ಅಸಮಾನತೆ ಹಾಗೂ ಮೂಢನಂಬಿಕೆಗಳ ವಿರುದ್ಧ ಕಿಚ್ಚು ಮೊದಲಿನಿಂದಲೂ ಇತ್ತು. ಅವರು ನಮಗೆ ದೊಡ್ಡ ಆಸ್ತಿ ಹಾಗೂ ಸ್ಫೂರ್ತಿ" ಎಂದರು.

ಡಾ. ಲಿಂಗರಾಜ ಅಂಗಡಿ ಮಾತನಾಡಿದರು. ಮಾಜಿ ಸಂಸದ ಐ.ಜಿ. ಸನದಿ, ನಿವೃತ್ತ ಹಿರಿಯ ಕೆಎಎಸ್ ಅಧಿಕಾರಿ ಎಂ.ವಿ. ಗೊಂಗಡಶೆಟ್ಟಿ, ಕಸಾಪ ಗೌರವ ಕಾರ್ಯದರ್ಶಿ ಪ್ರೊ. ಕೆ.ಎಸ್. ಕೌಜಲಗಿ, ರಾಜ್ಯಪಾಲರ ವಿಶೇಷ ಕಾರ್ಯದರ್ಶಿ ಆರ್. ಪ್ರಭುಶಂಕರ, ಐಟಿ ತಜ್ಞ ಪ್ರಭುದೇವ ಬಗಲಿ ಸೇರಿದಂತೆ ಅನೇಕರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಪಟ್ಟಣಶೆಟ್ಟಿ ಅವರ ಅಳಿಯ ಹಾಗೂ ನಿವೃತ್ತ ಬ್ಯಾಂಕ್ ಅಧಿಕಾರಿ ಜೆ.ಎಸ್. ಪ್ರಸನ್ನಕುಮಾರ ಪ್ರಾಸ್ತಾವಿಕವಾಗಿ ಮಾತನಾಡಿದರು. ಪತ್ರಕರ್ತ ಗಿರೀಶ ಪಟ್ಟಣಶೆಟ್ಟಿ ಸ್ವಾಗತಿಸಿದರು. ಡಾ. ಮೈತ್ರೇಯಿಣಿ ಗದಿಗೆಪ್ಪಗೌಡರ ನಿರೂಪಿಸಿದರು.

ಗ್ರಂಥ ದಾಸೋಹಿಗಳಾದ ಶಂಕರ ಕೋಳಿವಾಡ, ದಾಕ್ಷಾಯಣಿ ಕೋಳಿವಾಡ ಹಾಗೂ ರತ್ನಮ್ಮ ಪೂಜಾರ ಅವರನ್ನು ಇದೇ ಸಂದರ್ಭದಲ್ಲಿ ಸನ್ಮಾನಿಸಲಾಯಿತು.

### 'ತುಪ್ಪದ ತಲೆಯವರು' ಶೀರ್ಷಿಕೆಗೆ ಅಪಾರ್ಥ ಬೇಡ

ಪ್ರೊ. ಎಸ್.ವಿ. ಪಟ್ಟಣಶೆಟ್ಟಿ ಮಾತನಾಡಿ, "ನನ್ನ ಬರವಣಿಗೆಗೆ ಬಸವಣ್ಣ ಹಾಗೂ ಶರಣರು ಪ್ರೇರಕಶಕ್ತಿಯಾಗಿದ್ದಾರೆ. ಬಸವ ಕೇಂದ್ರ ನನ್ನ ಸಾಹಿತ್ಯ ಕೃಷಿಗೆ ಪ್ರೇರಣೆ ನೀಡುವ ಮೂಲಕ ನನ್ನನ್ನು ಬೆಳೆಸಿದೆ, ಬೆಳಗಿಸಿದೆ" ಎಂದರು.

'ತುಪ್ಪದ ತಲೆಯವರು' ಕೃತಿಯ ಕುರಿತು ಅಪಾರ್ಥ ಮಾಡಿಕೊಳ್ಳಬಾರದು. ದುಡಿಯದೆ ದುಡಿದವರ ಬೆವರಿನಲ್ಲಿ ತುಪ್ಪ ತಿನ್ನುವವರನ್ನು ಉದ್ದೇಶಿಸಿ ಈ ಶೀರ್ಷಿಕೆ ಇಡಲಾಗಿದೆ ಎಂದು ಸ್ಪಷ್ಟಪಡಿಸಿದರು.

ಬಿಸಿಲಿನಿಂದ ರಕ್ಷಿಸಿಕೊಳ್ಳಲು ಮುಂಜಾನೆ ಕೆಲಸ ಮುಗಿಸಿ–ಕಂದಕೂರ ಸೂಚನೆ

# ಗುಣಮಟ್ಟದ ಕೆಲಸ ಮಾಡಿದರೆ ನಿರಂತರ ಉದ್ಯೋಗ

■ವಿಜಯಸಾಕ್ಷಿ ಸುದ್ದಿ, ರೋಣ

ತಾಲೂಕಿನ ಸವಡಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹೊನ್ನಾಪೂರ ಗ್ರಾಮದಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ (ನರೇಗಾ) ಅಡಿಯಲ್ಲಿ ನಡೆಯುತ್ತಿರುವ ಸಾಮೂಹಿಕ ಬದು ನಿರ್ಮಾಣ ಕಾಮಗಾರಿಗೆ ರೋಣ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳಾದ ಚಂದ್ರಶೇಖರ ಬಿ ಕಂದಕೂರ ಭೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಿದರು.

ಕಾಮಗಾರಿ ಸ್ಥಳದಲ್ಲಿ ಕೆಲಸದ ಪ್ರಗತಿ, ಗುಣಮಟ್ಟ ಹಾಗೂ ಕೂಲಿಕಾರರಿಗೆ ಕಲ್ಪಿಸಲಾಗುತ್ತಿರುವ ಮೂಲ ಸೌಲಭ್ಯಗಳ ಕುರಿತು ಪರಿಶೀಲನೆ ನಡೆಸಿದ ಅವರು, ಸರ್ಕಾರದ ಮಾರ್ಗಸೂಚಿಯಂತೆ ಕೂಲಿಕಾರರು ಅಳತೆಗೆ ತಕ್ಕಂತೆ ಕೆಲಸ ನಿರ್ವಹಿಸಬೇಕು ಎಂದು ಸೂಚಿಸಿದರು.

ಬಿಸಿಲಿನ ತಾಪಮಾನ



ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಆರೋಗ್ಯದ ದೃಷ್ಟಿಯಿಂದ ಎಲ್ಲರೂ ಮುಂಜಾನೆ ಬೇಗ ಕೆಲಸಕ್ಕೆ ಹಾಜರಾಗಿ ಮಧ್ಯಾಹ್ನದೊಳಗೆ ಕೆಲಸ ಮುಗಿಸಿಕೊಳ್ಳುವಂತೆ ಸಲಹೆ ನೀಡಿದರು.

ಈ ವೇಳೆ ಕೂಲಿಕಾರರು ಗ್ರಾಮದಲ್ಲಿ ನಿರಂತರವಾಗಿ ನರೇಗಾ ಕಾಮಗಾರಿಗಳನ್ನು ಆರಂಭಿಸಿ ಉದ್ಯೋಗಾವಕಾಶ ಕಲ್ಪಿಸುವಂತೆ ಮನವಿ ಮಾಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಕಾರ್ಯನಿರ್ವಾಹಕ ಅಧಿಕಾರಿಗಳು, ಗುಣಮಟ್ಟದ ಹಾಗೂ ನಿಯಮಾನುಸಾರ ಕೆಲಸ ನಿರ್ವಹಿಸಿದರೆ ನಿರಂತರವಾಗಿ ಉದ್ಯೋಗ ಒದಗಿಸಲಾಗುವುದು ಎಂದು ಭರವಸೆ ನೀಡಿದರು.

ಪರಿಶೀಲನೆ ಸಂದರ್ಭದಲ್ಲಿ ಕೂಲಿಕಾರರು ಹಾಗೂ ಸಿಬ್ಬಂದಿಗೆ ಹಲವು ಸೂಚನೆಗಳನ್ನು ನೀಡಲಾಯಿತು. ಪ್ರತಿದಿನ ಕಡ್ಡಾಯವಾಗಿ ಎರಡು ಬಾರಿ ಎನ್‌ಎಂಎಂಎಸ್ ಆ್ಯಪ್ ಮೂಲಕ ಹಾಜರಾತಿ ದಾಖಲಿಸಬೇಕು ಎಂದು ತಿಳಿಸಲಾಯಿತು.

ಕಾಯಕಬಂಧುಗಳು ತಮ್ಮ ವ್ಯಾಪ್ತಿಯ ಕೂಲಿಕಾರರಿಗೆ ಪ್ರತಿದಿನ ಕೆಲಸದ ಅಳತೆಯ ಕುರಿತು ಮಾಹಿತಿ ನೀಡಿ, ಸರಿಯಾದ ರೀತಿಯಲ್ಲಿ ಕೆಲಸ ನಿರ್ವಹಿಸಲು ಮಾರ್ಗದರ್ಶನ ನೀಡುವಂತೆ ಸೂಚಿಸಲಾಯಿತು.

ಎನ್‌ಎಂಆರ್ ಪಡೆದ ಕೂಲಿಕಾರರು ಕಡ್ಡಾಯವಾಗಿ ಕಾಮಗಾರಿ ಸ್ಥಳದಲ್ಲಿ ಹಾಜರಿದ್ದು ಕೆಲಸ ನಿರ್ವಹಿಸಬೇಕು ಎಂದು ಅಧಿಕಾರಿಗಳು ತಿಳಿಸಿದರು.

ನರೇಗಾ ಯೋಜನೆಯಡಿ ಕೈಗೊಳ್ಳಲಾಗುತ್ತಿರುವ ಬದು ನಿರ್ಮಾಣ ಕಾಮಗಾರಿಗಳು ಗ್ರಾಮೀಣ ಪ್ರದೇಶದಲ್ಲಿ ನೀರು ಸಂರಕ್ಷಣೆ, ಮಣ್ಣಿನ ಸದ್ಬಳಕೆ ಹಾಗೂ ರೈತರ ಭೂಮಿಯ ಅಭಿವೃದ್ಧಿಗೆ ಸಹಕಾರಿಯಾಗುತ್ತಿದ್ದು, ಗ್ರಾಮಾಭಿವೃದ್ಧಿಗೆ ಮಹತ್ವದ ಪಾತ್ರ ವಹಿಸುತ್ತಿವೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಪಿಡಿಓ, ಟಿಐಇಸಿ, ಡಿಇಓ, ಜಿಕೆಎಂ, ಗ್ರಾಮ ಪಂಚಾಯಿತಿ ಸಿಬ್ಬಂದಿ ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

## ಕುಡಿಯುವ ನೀರಿಗೆ ಮೊದಲ ಆದ್ಯತೆ

▸▸ಮೊದಲನೇ ಪುಟದಿಂದ

ನೀರಿನ ಪೋಲು ಹಾಗೂ ಅಪವ್ಯಯ ತಡೆಗಟ್ಟಿ ವರ್ಷಪೂರ್ತಿ ಸಮರ್ಪಕ ನೀರು ನಿರ್ವಹಣೆಗೆ ಕ್ರಮ ಕೈಗೊಳ್ಳಬೇಕು. ತಿಮ್ಮಾಪೂರ ಸೇರಿದಂತೆ ನೀರು ಸರಬರಾಜಿನಲ್ಲಿ ಸಮಸ್ಯೆ ಇರುವ ಗ್ರಾಮಗಳನ್ನು ಗುರುತಿಸಿ ತಕ್ಷಣ ಕ್ರಮ ಕೈಗೊಳ್ಳುವಂತೆ ನಿರ್ದೇಶನ ನೀಡಿದರು.

ಅಗತ್ಯವಿದ್ದಲ್ಲಿ ಖಾಸಗಿ ಬೋರ್‌ವೆಲ್ ಮೂಲಕ ನೀರು ಪೂರೈಸಲು ಸಿದ್ಧತೆ ಮಾಡಿಕೊಳ್ಳಬೇಕು. ಜಿಲ್ಲೆಯ ಕೆರೆಗಳಲ್ಲಿ ನೀರು ಸಂಗ್ರಹಕ್ಕೆ ಆದ್ಯತೆ ನೀಡಬೇಕು. ಆರ್‌ಓ ಘಟಕಗಳ ಸಮರ್ಪಕ ನಿರ್ವಹಣೆ ಕುರಿತು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು ಪರಿಶೀಲನೆ ನಡೆಸಿ ವರದಿ ಸಲ್ಲಿಸಬೇಕು ಎಂದು ತಿಳಿಸಿದರು.

ಅಧಿಕ ಬಿಸಿಲಿನ ಹಿನ್ನೆಲೆಯಲ್ಲಿ ಜನಸಾಮಾನ್ಯರು, ವೃದ್ಧರು ಹಾಗೂ ಮಕ್ಕಳ ಆರೋಗ್ಯ ರಕ್ಷಣೆಗೆ ವಿಶೇಷ ಗಮನ ಹರಿಸಬೇಕು. ಆಸ್ಪತ್ರೆಗಳಲ್ಲಿ ವೈದ್ಯರು ಹಾಗೂ ಸಿಬ್ಬಂದಿ ನಿರಂತರ ಲಭ್ಯವಿದ್ದು, ತುರ್ತು ಚಿಕಿತ್ಸಾ ವ್ಯವಸ್ಥೆ ಸಮರ್ಪಕವಾಗಿರಬೇಕು ಎಂದರು.

ಜಿಲ್ಲೆಯಲ್ಲಿ ಶಾಲೆಯಿಂದ ಹೊರಗುಳಿದಿರುವ 219 ಮಕ್ಕಳನ್ನು ಮರಳಿ ಶಾಲೆಗೆ ಕರೆತರಲು ವಿಶೇಷ ಅಭಿಯಾನ ರೂಪಿಸಬೇಕು. ಯಾವುದೇ ಮಗು ಶಿಕ್ಷಣದಿಂದ ವಂಚಿತವಾಗಬಾರದು ಎಂದು ಸೂಚಿಸಿದರು.

ಎಸ್‌ಎಸ್‌ಎಲ್‌ಸಿ ಫಲಿತಾಂಶದಲ್ಲಿ ಜಿಲ್ಲೆ 16ನೇ ಸ್ಥಾನದಲ್ಲಿರುವ ಕುರಿತು ಅಸಮಾಧಾನ ವ್ಯಕ್ತಪಡಿಸಿದ ಅವರು, ಪಿಯುಸಿ ಫಲಿತಾಂಶ ಅತ್ಯಂತ ಕಳಪೆ ಮಟ್ಟದಲ್ಲಿದೆ ಎಂದು ವಿಷಾದಿಸಿದರು. ಶಿಕ್ಷಕರ ಕೊರತೆ ಇರುವ ಕಡೆ ಅತಿಥಿ ಶಿಕ್ಷಕರ ಸೇವೆ ಪಡೆಯುವಂತೆ ಸೂಚಿಸಿದರು.

ಗ್ಯಾರಂಟಿ ಯೋಜನೆಗಳ ಅನುಷ್ಠಾನ ಉತ್ತಮವಾಗಿದ್ದು, ಯಾವುದೇ ಅರ್ಹ ಫಲಾನುಭವಿಗಳು ವಂಚಿತರಾಗಬಾರದು ಎಂದರು.

ಗೃಹ ಬಳಕೆ ಹಾಗೂ ವಾಣಿಜ್ಯ ಬಳಕೆಯ ಗ್ಯಾಸ್ ಸಿಲಿಂಡರ್ ಪೂರೈಕೆಯಲ್ಲಿ ಆಗುತ್ತಿರುವ ವಿಳಂಬ ಸರಿಪಡಿಸಿ ಸಾರ್ವಜನಿಕರಿಗೆ ಸಮಯಕ್ಕೆ ಸರಿಯಾಗಿ ಸಿಲಿಂಡರ್ ಲಭ್ಯವಾಗುವಂತೆ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.

ಜಿಲ್ಲೆಯಲ್ಲಿ ಹೆಚ್ಚು ಹೆಚ್ಚು ಉದ್ಯೋಗ ಮೇಳಗಳನ್ನು ಆಯೋಜಿಸಿ ನಿರುದ್ಯೋಗಿ ಯುವಕರಿಗೆ ಉದ್ಯೋಗಾವಕಾಶ ಕಲ್ಪಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಕೆರೆಗಳ ಸಂರಕ್ಷಣೆ ಮೂಲಕ ನೀರಿನ ಮೂಲಗಳನ್ನು ಶಾಶ್ವತವಾಗಿ ಉಳಿಸಬೇಕು. ಕೆರೆಗಳು ಪ್ರಾಣಿ–ಪಕ್ಷಿಗಳು ಸೇರಿದಂತೆ ಎಲ್ಲ ಜೀವಿಗಳಿಗೂ ಜೀವಜಲದ ಮೂಲವಾಗಿವೆ ಎಂದು ಹೇಳಿದರು.

ಪ್ರತಿ ಗ್ರಾಮ ಹಾಗೂ ವಾರ್ಡ್ ಮಟ್ಟದಲ್ಲಿ ಹಸಿ ಮತ್ತು ಒಣ ಕಸವನ್ನು ಮೂಲದಲ್ಲೇ ವಿಂಗಡಿಸಿ ವೈಜ್ಞಾನಿಕವಾಗಿ ವಿಲೇವಾರಿ ಮಾಡುವ ವ್ಯವಸ್ಥೆ ಜಾರಿಗೆ ತರಬೇಕು ಎಂದು ಸೂಚಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ ಆರ್, ಎಸಿ ಗಂಗಪ್ಪ ಎಂ, ಡಿಎಸ್‌ಸಿಆರ್ ಮುಂಡರಗಿ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ತಹಶೀಲ್ದಾರರು ಹಾಗೂ ತಾಪಂ ಇಓಗಳು ಉಪಸ್ಥಿತರಿದ್ದರು.

ಎನ್‌ಟಿಎ ರದ್ದುಪಡಿಸಿ, ಕೋಚಿಂಗ್ ಮಾಫಿಯಾ ವಿರುದ್ಧ ಕಠಿಣ ಕ್ರಮಕ್ಕೆ ಆಗ್ರಹ

# ನೀಟ್ ಪ್ರಶ್ನೆಪತ್ರಿಕೆ ಸೋರಿಕೆಗೆ ಆಕ್ರೋಶ



■ವಿಜಯಸಾಕ್ಷಿ ಸುದ್ದಿ, ಗದಗ

ನೀಟ್-ಯುಜಿ ಪರೀಕ್ಷೆಯಲ್ಲಿ ಪದೇ ಪದೇ ಪ್ರಶ್ನೆಪತ್ರಿಕೆ ಸೋರಿಕೆ ಆಗುತ್ತಿರುವುದು ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯದೊಂದಿಗೆ ನಡೆಯುತ್ತಿರುವ ಘೋರ ಅನ್ಯಾಯವಾಗಿದೆ ಎಂದು ಏಡ್ಸೋ ಆರೋಪಿಸಿದೆ.

ಈ ಕುರಿತು ಪ್ರಕಟಣೆ ನೀಡಿರುವ ಗದಗ ಜಿಲ್ಲಾ ಸಂಚಾಲಕಿ ಎಂ. ಶಾಂತಿ, ಕೇವಲ ಮೂರು ವರ್ಷಗಳಲ್ಲಿ ಎರಡನೇ ಬಾರಿ ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣ ಬೆಳಕಿಗೆ ಬಂದಿರುವುದು ರಾಷ್ಟ್ರೀಯ ಪರೀಕ್ಷಾ ಸಂಸ್ಥೆ (NTA)ಯ ವೈಫಲ್ಯವನ್ನು ಬಯಲಿಗೆಳೆಯುತ್ತಿದೆ ಎಂದು ಹೇಳಿದರು.

ವೈದ್ಯಕೀಯ ಶಿಕ್ಷಣದ ಕನಸು ಹೊತ್ತಿರುವ ಲಕ್ಷಾಂತರ ವಿದ್ಯಾರ್ಥಿಗಳ ಶ್ರಮ, ಬೆವರು ಮತ್ತು ಭವಿಷ್ಯವನ್ನು ಹಣದ ಬಲದಿಂದ ಹರಾಜು ಹಾಕಲಾಗುತ್ತಿದೆ. ಎನ್‌ಟಿಎ ಸಂಸ್ಥೆ "ಕೋಚಿಂಗ್ ಮಾಫಿಯಾ"ಗಳ ಕೈಗೊಂಬೆಯಂತೆ ವರ್ತಿಸುತ್ತಿದ್ದು, ಸಾರ್ವಜನಿಕ ಶಿಕ್ಷಣ ವ್ಯವಸ್ಥೆಯನ್ನೇ ದುರ್ಬಲಗೊಳಿಸುತ್ತಿದೆ ಎಂದು ದೂರಿದರು.

ಪರೀಕ್ಷಾ ವ್ಯವಸ್ಥೆಯಲ್ಲಿನ ಭ್ರಷ್ಟಾಚಾರ ಮತ್ತು ಆಡಳಿತಾತ್ಮಕ ನಿರ್ಲಕ್ಷ್ಯದಿಂದ ವಿದ್ಯಾರ್ಥಿಗಳಲ್ಲಿ ಆತಂಕ ಹಾಗೂ ಹತಾಶೆ ಹೆಚ್ಚುತ್ತಿದೆ. ಕೇವಲ ಕೆಲವರ ಲಾಭಕ್ಕಾಗಿ ಶಿಕ್ಷಣವನ್ನು ವ್ಯಾಪಾರೀಕರಣಗೊಳಿಸಿರುವ ಪರಿಣಾಮ ಇಂತಹ ಅವ್ಯವಹಾರಗಳು ಮರುಕಳಿಸುತ್ತಿವೆ ಎಂದು ಆರೋಪಿಸಿದರು.

ಎನ್‌ಟಿಎ ಸಂಸ್ಥೆಯನ್ನು ತಕ್ಷಣವೇ ರದ್ದುಪಡಿಸಿ, ಪಾರದರ್ಶಕ ಹಾಗೂ ಸುರಕ್ಷಿತ ಪರೀಕ್ಷಾ ವ್ಯವಸ್ಥೆ ಜಾರಿಗೆ ತರಬೇಕು. ಪ್ರಶ್ನೆಪತ್ರಿಕೆ ಸೋರಿಕೆ ಹಿಂದೆ ಇರುವ ವ್ಯಕ್ತಿಗಳು ಹಾಗೂ ಕೋಚಿಂಗ್ ಮಾಫಿಯಾ ವಿರುದ್ಧ ಸ್ವತಂತ್ರ ನ್ಯಾಯಾಂಗ ತನಿಖೆ ನಡೆಸಿ, ತಪ್ಪಿತಸ್ಥರಿಗೆ ಕಠಿಣ ಶಿಕ್ಷೆ ವಿಧಿಸಬೇಕು ಎಂದು ಆಗ್ರಹಿಸಿದರು.

ಸಾರ್ವಜನಿಕ ಶಿಕ್ಷಣ ವ್ಯವಸ್ಥೆಯನ್ನು ರಕ್ಷಿಸಲು ಪ್ರವೇಶ ಪರೀಕ್ಷಾ ಪದ್ಧತಿಯಲ್ಲಿ ಮೂಲಭೂತ ಬದಲಾವಣೆ ತರಬೇಕು. ಸಾಮಾನ್ಯ ವಿದ್ಯಾರ್ಥಿಗಳಿಗೆ ನ್ಯಾಯ ದೊರೆಯುವಂತೆ ಖಾಸಗಿ ವಾಣಿಜ್ಯ ಹಿತಾಸಕ್ತಿಗಳಿಂದ ಮುಕ್ತವಾದ ಶಿಕ್ಷಣ ನೀತಿ ಜಾರಿಗೆ ಬರಬೇಕು ಎಂದು ಒತ್ತಾಯಿಸಿದರು.

ವಿದ್ಯಾರ್ಥಿಗಳು, ಪೋಷಕರು ಹಾಗೂ ಶಿಕ್ಷಣ ಪ್ರೇಮಿಗಳು ಈ ಅನ್ಯಾಯದ ವಿರುದ್ಧ ಒಗ್ಗೂಡಿ ಹೋರಾಟ ನಡೆಸಬೇಕು ಎಂದು ಏಡ್ಸೋ ಕರೆ ನೀಡಿದೆ.

"ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಕೇವಲ ಪರೀಕ್ಷಾ ವೈಫಲ್ಯವಲ್ಲ; ಅದು ಲಕ್ಷಾಂತರ ವಿದ್ಯಾರ್ಥಿಗಳ ಕನಸುಗಳ ಮೇಲಿನ ದೌರ್ಜನ್ಯ."

**– ಎಂ. ಶಾಂತಿ, ಜಿಲ್ಲಾ ಸಂಚಾಲಕಿ**

ಪೆಟ್ರೋಲ್, ಐಕಲು, ಗೊಬ್ಬರ ದರ ಏರಿಕೆಯಿಂದ ಜನರು ಕಂಗಾಲು-ಕೇಂದ್ರ ಬಿಜೆಪಿ ಸರ್ಕಾರ ವಿರುದ್ಧ ಅಶೋಕ ಮಂದಾಲಿ ವಾಗ್ದಾಳಿ

# "ಬೆಲೆ ಏರಿಕೆ ಮುಚ್ಚಿಹಾಕಲು ಮೋದಿ ಮಿತ ಬಳಕೆಯ ನಾಟಕ"

■ವಿಜಯಸಾಕ್ಷಿ ಸುದ್ದಿ, ಗದಗ

ಕಳೆದ 12 ವರ್ಷಗಳಿಂದ ನಿರಂತರ ಬೆಲೆ ಏರಿಕೆ ಮೂಲಕ ಜನಸಾಮಾನ್ಯರನ್ನು ಸಾಲದ ಸುಳಿಗೆ ತಳ್ಳಿರುವ ಕೇಂದ್ರ ಬಿಜೆಪಿ ಸರ್ಕಾರ ಇದೀಗ "ಮಿತ ಬಳಕೆ" ಪಾಠ ಹೇಳುವ ಮೂಲಕ ತನ್ನ ವೈಫಲ್ಯವನ್ನು ಮರೆಮಾಚಲು ಯತ್ನಿಸುತ್ತಿದೆ ಎಂದು ಅಶೋಕ ಮಂದಾಲಿ ಆರೋಪಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಭಾರತ ವಿಶ್ವದ ನಾಲ್ಕನೇ ಅತಿದೊಡ್ಡ ಆರ್ಥಿಕ ಶಕ್ತಿಯಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ ಕೆಲವೇ ಅವಧಿಯಲ್ಲಿ ದೇಶ ಆರ್ಥಿಕ ಕುಸಿತದತ್ತ ಸಾಗುತ್ತಿದೆ ಎಂದು ಟೀಕಿಸಿದರು.

ಪೆಟ್ರೋಲ್ ಹಾಗೂ ಡೀಸೆಲ್ ಬಳಕೆ ಕಡಿಮೆ ಮಾಡಿ, ಗೊಬ್ಬರ ಬಳಕೆಯನ್ನು 50 ಶೇಕಡಾ ಇಳಿಸಿ ಸಾವಯವ ಕೃಷಿ ಮಾಡಿ, ಒಂದು ವರ್ಷ ಚಿನ್ನ ಖರೀದಿ ಮಾಡಬೇಡಿ, ಖಾಸಗಿ ವಾಹನ ಬಿಟ್ಟು ಬಸ್, ಮೆಟ್ರೋ ಹಾಗೂ ರೈಲು ಬಳಸಿ ಎಂದು ಪ್ರಧಾನಿ ನೀಡುತ್ತಿರುವ ಕರೆಗಳು ಕೇಂದ್ರ ಸರ್ಕಾರದ ವೈಫಲ್ಯ ಮುಚ್ಚಿಹಾಕುವ ಪ್ರಯತ್ನ ಎಂದು ಆರೋಪಿಸಿದರು.

2026ರಲ್ಲಿ ಭಾರತ ಒಟ್ಟು 775 ಬಿಲಿಯನ್ ಡಾಲರ್ ಆಮದಿನಲ್ಲಿ ಕಚ್ಚಾ ತೈಲಕ್ಕೆ 134.7 ಬಿಲಿಯನ್ ಡಾಲರ್, ಚಿನ್ನಕ್ಕೆ 72 ಬಿಲಿಯನ್ ಡಾಲರ್ ಹಾಗೂ ರಸಗೊಬ್ಬರಗಳಿಗೆ 14.5 ಬಿಲಿಯನ್ ಡಾಲರ್ ವೆಚ್ಚ ಮಾಡಿದೆ. ಇದರಿಂದ ವ್ಯಾಪಾರ ಕೊರತೆ 20 ಬಿಲಿಯನ್ ಡಾಲರ್ ತಲುಪಿದೆ ಎಂದು ಹೇಳಿದರು.

ಅಮೆರಿಕದ ಒತ್ತಡದಿಂದ ರಷ್ಯಾದಿಂದ ಕಚ್ಚಾ ತೈಲ ಆಮದು ಕಡಿತಗೊಂಡಿದ್ದು, ಇರಾನ್-ಇಸ್ರೇಲ್ ಯುದ್ಧ ಬಿಕ್ಕಟ್ಟಿನಿಂದ ದೇಶದ ತೈಲ ಪರಿಸ್ಥಿತಿ ಹದಗೆಟ್ಟಿದೆ. ಇದನ್ನು ಮುಚ್ಚಿಹಾಕಲು ಕೇಂದ್ರ ಸರ್ಕಾರ ಜನರಿಗೆ ಪೆಟ್ರೋಲ್-ಡೀಸೆಲ್ ಕಡಿಮೆ ಬಳಸಿ ಎಂದು ಹೇಳುತ್ತಿದೆ ಎಂದು ಆರೋಪಿಸಿದರು.



2 ಕೋಟಿ ಉದ್ಯೋಗ ಸೃಷ್ಟಿ ಹಾಗೂ ರೈತರ ಆದಾಯ ದ್ವಿಗುಣಗೊಳಿಸುವ ಭರವಸೆ ನೀಡಿದ್ದ ಮೋದಿ ಸರ್ಕಾರ ಇದೀಗ "ವಿಕಸಿತ ಭಾರತ 2047" ಎಂಬ ಹೊಸ ಕನಸು ಬಿತ್ತುತ್ತಿದೆ ಎಂದು ವ್ಯಂಗ್ಯವಾಡಿದರು.

ಚುನಾವಣೆ ಬಳಿಕ ಐಕಲು ದರ ಏರಿಕೆ ಮಾಡುವುದು ಕೇಂದ್ರ ಸರ್ಕಾರದ ರೂಢಿಯಾಗಿದೆ. 2026ರ ಮೇ 1ರಂದು ವಾಣಿಜ್ಯ ಐಕಲು ಸಿಲಿಂಡರ್ ದರವನ್ನು 993 ರೂ. ಹಾಗೂ 5 ಕೆಜಿ ಐಕಲು ದರವನ್ನು 261 ರೂ. ಹೆಚ್ಚಿಸಲಾಗಿದೆ. ಜನವರಿಯಲ್ಲಿ 1691 ರೂ. ಇದ್ದ ವಾಣಿಜ್ಯ ಐಕಲು ದರ ಕೇವಲ ಐದು ತಿಂಗಳಲ್ಲಿ 3071 ರೂ. ತಲುಪಿದ್ದು 81.58 ಶೇಕಡಾ ಏರಿಕೆಯಾಗಿದೆ ಎಂದು ಹೇಳಿದರು.

"ಜನರನ್ನು ಸಾಲದ ಸುಳಿಗೆ ತಳ್ಳಿ ಬೆಲೆ ಏರಿಕೆಯ ಭಾರ ಹಾಕಿದ ಕೇಂದ್ರ ಬಿಜೆಪಿ ಸರ್ಕಾರ ಈಗ ಮಿತ ಬಳಕೆಯ ಪಾಠ ಹೇಳುತ್ತಿದೆ. ಇದು ವೈಫಲ್ಯ ಮುಚ್ಚಿಹಾಕುವ ಹೊಸ ನಾಟಕ."

**– ಅಶೋಕ ಮಂದಾಲಿ,**
ಪ್ರಚಾರ ಸಮಿತಿ ಜಿಲ್ಲಾ ಅಧ್ಯಕ್ಷ

ಆಟೋ ಐಕಲು ದರವನ್ನು 5.73 ರೂ. ಹೆಚ್ಚಿಸಿ 95.08 ರೂ.ಗೆ ಏರಿಕೆ ಮಾಡಿರುವುದರಿಂದ ದೇಶದ ಒಂದು ಕೋಟಿಗೂ ಹೆಚ್ಚು ಆಟೋ ಚಾಲಕರ ಬದುಕು ಸಂಕಷ್ಟಕ್ಕೆ ಸಿಲುಕಿದೆ ಎಂದು ದೂರಿದರು.

2020ರ ಕೊರೊನಾ ಮಹಾಮಾರಿಯ ಸಮಯದಲ್ಲೂ ಐಕಲು ದರವನ್ನು 581 ರೂ.ಯಿಂದ 694 ರೂ.ಗೆ, ಪೆಟ್ರೋಲ್ ದರವನ್ನು 72ರಿಂದ 86 ರೂ.ಗೆ ಹಾಗೂ ಡೀಸೆಲ್ ದರವನ್ನು 66ರಿಂದ 78 ರೂ.ಗೆ ಹೆಚ್ಚಿಸಲಾಗಿತ್ತು ಎಂದು ನೆನಪಿಸಿದರು.

ದೇಶದ 50 ಶೇಕಡಕ್ಕಿಂತ ಹೆಚ್ಚು ಕೃಷಿ ಕುಟುಂಬಗಳು ಸಾಲದಲ್ಲಿ ಮುಳುಗಿದ್ದು, ಸರಾಸರಿ ಪ್ರತಿ ಕುಟುಂಬದ ಮೇಲೆ 74,121 ರೂ. ಸಾಲ ಬಾಕಿಯಿದೆ ಎಂದು ಓಖಖಔ ವರದಿ ತಿಳಿಸಿದೆ. ಆದರೂ ರೈತರ ಬಗ್ಗೆ ಕೇಂದ್ರ ಸರ್ಕಾರಕ್ಕೆ ಕಾಳಜಿ ಇಲ್ಲ ಎಂದು ಆರೋಪಿಸಿದರು.

ರೂಪಾಯಿ ಮೌಲ್ಯ ಕುಸಿತ, ನಿರುದ್ಯೋಗ, ಕುಟುಂಬಗಳ ಮೇಲಿನ ಸಾಲದ ಹೊರೆ ಹಾಗೂ ಬೆಲೆ ಏರಿಕೆಗಳಿಂದ ಜನರು ಸಂಕಷ್ಟ ಅನುಭವಿಸುತ್ತಿದ್ದಾರೆ. 2014ರಲ್ಲಿ 55 ಲಕ್ಷ ಕೋಟಿ ರೂ. ಇದ್ದ ದೇಶದ ಸಾಲ ಈಗ 216 ಲಕ್ಷ ಕೋಟಿ ರೂ.ಗೆ ಏರಿಕೆಯಾಗಿದೆ ಎಂದು ಹೇಳಿದರು.

"ಮೇಕ್ ಇನ್ ಇಂಡಿಯಾ" ಯೋಜನೆಯಡಿ 2022ರೊಳಗೆ 10 ಕೋಟಿ ಉದ್ಯೋಗ ಸೃಷ್ಟಿಸುವ ಗುರಿ ಇಟ್ಟಿದ್ದರೂ, 2017ರಿಂದ 2021ರ ಅವಧಿಯಲ್ಲಿ 2.4 ಕೋಟಿ ಉದ್ಯೋಗ ಕಳೆದುಹೋಗಿವೆ ಎಂದು ಆರೋಪಿಸಿದರು.

ಕಾರ್ಪೊರೇಟ್ ತೆರಿಗೆಯನ್ನು 30 ಶೇಕಡದಿಂದ 22 ಶೇಕಡಕ್ಕೆ ಇಳಿಸಿ ದೊಡ್ಡ ಉದ್ಯಮಿಗಳಿಗೆ ಅನುಕೂಲ ಮಾಡಿಕೊಟ್ಟ ಕೇಂದ್ರ ಸರ್ಕಾರ ಸಾಮಾನ್ಯ ಜನರ ಬದುಕನ್ನು ದುಬಾರಿಗೊಳಿಸಿದೆ ಎಂದು ಟೀಕಿಸಿದರು.

ಬೆಲೆ ಏರಿಕೆಯಿಂದ ಜನರಿಗೆ ಬರೆ

- 2014ರಲ್ಲಿ ಪೆಟ್ರೋಲ್ ದರ : 71 ರೂ.
- 2026ರಲ್ಲಿ ಪೆಟ್ರೋಲ್ ದರ : 102 ರೂ.
- 2014ರಲ್ಲಿ ಡೀಸೆಲ್ ದರ : 55 ರೂ.
- 2026ರಲ್ಲಿ ಡೀಸೆಲ್ ದರ : 90 ರೂ.
- ವಾಣಿಜ್ಯ ಐಕಲು ದರ : 1691 ರೂ.ದಿಂದ 3071 ರೂ.ಗೆ ಏರಿಕೆ
- ದೇಶದ ಒಟ್ಟು ಸಾಲ : 55 ಲಕ್ಷ ಕೋಟಿ ರೂ.ದಿಂದ 216 ಲಕ್ಷ ಕೋಟಿ ರೂ.ಗೆ ಏರಿಕೆ
- ಪೆಟ್ರೋಲ್-ಡೀಸೆಲ್ ತೆರಿಗೆಯಿಂದ ಸಂಗ್ರಹ : 43 ಲಕ್ಷ ಕೋಟಿ ರೂ.

ಇಬ್ರಾಹಿಂ ಸಾಹೇಬರ ಸೇವೆ ಸ್ಮರಣೀಯ!

# 95ನೇ ಜನ್ಮ ದಿನಾಚರಣೆಯಲ್ಲಿ ಸಮಾಜ ಮುಖಂಡರಿಂದ ಸ್ಮರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ನದಾಫ್ ಪಿಂಜಾರ ಸಂಘದ ಗದಗ ಜಿಲ್ಲಾ ಘಟಕದ ವತಿಯಿಂದ ಸಂಘದ ಸಂಸ್ಥಾಪಕ ಅಧ್ಯಕ್ಷರಾದ ದಿವಂಗತ ಹಾಜಿ ಎಚ್. ಇಬ್ರಾಹಿಂ ಸಾಹೇಬ ಅವರ 95ನೇ ಜನ್ಮ ದಿನಾಚರಣೆಯನ್ನು ನಗರದ ಸಂಘದ ಕಚೇರಿಯಲ್ಲಿ ಆಚರಿಸಲಾಯಿತು.




ಕಾರ್ಯಕ್ರಮದಲ್ಲಿ ಮಾತನಾಡಿದ ಅಬ್ದುಲ್ ಶರೀಫ್‌ಸಾಬ್, ಹಿಂದುಳಿದ ನದಾಫ್ ಪಿಂಜಾರ ಸಮಾಜವನ್ನು ಒಗ್ಗೂಡಿಸಿ ಸಂಘಟಿಸುವ ಮೂಲಕ ದಿವಂಗತ ಇಬ್ರಾಹಿಂ ಸಾಹೇಬರು ಸಮಾಜಕ್ಕೆ ಹೊಸ ದಿಕ್ಕು ತೋರಿದರು. ಸರ್ಕಾರದಿಂದ ಪ್ರವರ್ಗ-1ರ ಮೀಸಲಾತಿ ಸೌಲಭ್ಯ ದೊರಕಿಸಿಕೊಟ್ಟು ಸಮಾಜವನ್ನು ಎಲ್ಲಾ ಕ್ಷೇತ್ರಗಳಲ್ಲಿ ಗುರುತಿಸುವ ಕಾರ್ಯ ಮಾಡಿದ್ದಾರೆ ಎಂದು ಸ್ಮರಿಸಿದರು.

ಸಮಾಜದ ಮುಂದಿನ ಪೀಳಿಗೆಗೆ ಆದರ್ಶ ಮತ್ತು ಮಾರ್ಗದರ್ಶಕರಾಗಿದ್ದ ಅವರು, ಎಲ್ಲ ಸಮಾಜ ಬಾಂಧವರೊಂದಿಗೆ ಬೆರೆತು ಕೋಮು ಸೌಹಾರ್ದತೆ ಮತ್ತು ಸಾಮರಸ್ಯದ ಬದುಕು ನಡೆಸಿದರು. ಅವರ ಕನಸುಗಳನ್ನು ನನಸು ಮಾಡುವುದೇ ಅವರಿಗೆ ಸಲ್ಲಿಸುವ ನಿಜವಾದ ಗೌರವ ಎಂದು ಹೇಳಿದರು.

ಡಾ. ವಾಯ್. ಆರ್. ಬೇಲೆರಿ ಮಾತನಾಡಿ, ಇಬ್ರಾಹಿಂ ಸಾಹೇಬರು ಜನಾಂಗದ ಅಭಿವೃದ್ಧಿಗಾಗಿ ತ್ಯಾಗ, ಶ್ರಮ ಮತ್ತು ಸೇವೆಯ ಮೂಲಕ ಅಪಾರ ಕೊಡುಗೆ ನೀಡಿದ್ದಾರೆ. ಅವರ ಸೇವೆಯನ್ನು ಗುರುತಿಸಿ ಸಂಘದಿಂದ "ನದಾಫ್ ಪಿಂಜಾರ ರತ್ನ" ರಾಜ್ಯ ಪ್ರಶಸ್ತಿಯನ್ನು ಮರಣೋತ್ತರವಾಗಿ ಪ್ರದಾನಿಸಲಾಗಿದೆ ಎಂದು ತಿಳಿಸಿದರು.

ಸಮಾಜದ ಪ್ರತಿಯೊಬ್ಬರೂ ಅವರ ಮಾರ್ಗದರ್ಶನದಲ್ಲಿ ನಡೆಯಬೇಕು. ಸಮಾಜ ಬಾಂಧವರು ತನು-ಮನ-ಧನ ಅರ್ಪಿಸಿ ಸಂಘಕ್ಕೆ ಸೇವೆ ಸಲ್ಲಿಸಿದಾಗ ಮಾತ್ರ ಸಮಾಜ ಅಭಿವೃದ್ಧಿಯಾಗುತ್ತದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕೆ. ಎಫ್. ಹಳ್ಯಾಳ, ಎಂ. ಬಿ. ನದಾಫ್, ಶೌಕತ್ ಎಂ. ಅಣ್ಣಿಗೇರಿ, ತಾಜಬಿ ನದಾಫ್, ಫರಿದಾಬೇಗಂ ಎಂ. ನದಾಫ್, ನಾಸಿರ್ ಚಿಕೇನಕೊಪ್ಪ, ಮೈನುದ್ದಿನ್ ಬಿಜಾಪೂರ, ಜಾಕೀರ್ ಹುಸೇನ್ ಬಾಗಲಕೋಟ, ರಮಜಾನಸಾಬ ನದಾಫ್, ರಾಜೇಸಾಬ ನದಾಫ್, ಡಿ. ಎಸ್. ನದಾಫ್, ಮೋದಿನಸಾಬ ಅಣ್ಣಿಗೇರಿ, ಹಸೀನಾ ನದಾಫ್ ಹಾಗೂ ಸೋಫಿಯಾ ನದಾಫ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಭೇಟಿ ನೀಡಿ ಸಾಂತ್ವನ ಹೇಳಬೇಕು. ನವೀನ ಮತ್ತು ಮುರಳಿ ಪ್ರಾಣ ಸ್ನೇಹಿತರಾಗಿದ್ದರು. ಜೀವನುದ್ದಕ್ಕೂ ಒಂದಾಗಿದ್ದ ಅವರು ಸಾವಿನಲ್ಲೂ ಒಂದಾದರು. ಗೆಳೆಯರ ಕುಟುಂಬಕ್ಕೆ ಭಗವಂತ ನೋವು ಸಹಿಸುವ ಶಕ್ತಿ ಕೊಡಲಿ.

– ಪ್ರಕಾಶ ಮ್ಯಾಗೇರಿ.
ಗಾಯಾಳು ಯುವಕ.

"ಸಂವಿಧಾನಿಕ ಪ್ರಜಾಸತ್ತೆಯ ಮೇಲಿನ ದಾಳಿ ವಿರುದ್ಧ ಜಾಗೃತಿ ಮೂಡಿಸುವುದೇ ಸಮ್ಮೇಳನದ ಉದ್ದೇಶ" – ಡಾ. ರಾಮಚಂದ್ರ ಹಂಸನೂರ

# ಸಂವಿಧಾನ ರಕ್ಷಣೆಗೆ ಮೇ ಸಾಹಿತ್ಯ ಸಮ್ಮೇಳನ



■ವಿಜಯಸಾಕ್ಷಿ ಸುದ್ದಿ, ಗದಗ

ದಲಿತರ ಹಿತಾಸಕ್ತಿ ಕಾಪಾಡುವ ಉದ್ದೇಶದಿಂದ ಪ್ರತಿವರ್ಷ ಆಯೋಜಿಸಲಾಗುವ ಮೇ ಸಾಹಿತ್ಯ ಮೇಳದ 12ನೇ ಸಾಹಿತ್ಯ ಸಮ್ಮೇಳನ ಮೇ 16 ಮತ್ತು 17 ರಂದು ಹುಬ್ಬಳ್ಳಿಯಲ್ಲಿ ನಡೆಯಲಿದೆ ಎಂದು ಡಾ. ರಾಮಚಂದ್ರ ಹಂಸನೂರ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, "ಸಂವಿಧಾನಿಕ ಪ್ರಜಾಸತ್ತೆಯ ಮೇಲಿನ ದಾಳಿ" ಎಂಬ ವಿಷಯಾಧಾರಿತವಾಗಿ ಈ ವರ್ಷದ ಸಮ್ಮೇಳನ ನಡೆಯಲಿದ್ದು, ಸಮಾಜದಲ್ಲಿ ಸಂವಿಧಾನ ಜಾಗೃತಿ ಮೂಡಿಸುವ ಉದ್ದೇಶ ಹೊಂದಿದೆ ಎಂದರು.

ಕಾರ್ಯಕ್ರಮವನ್ನು ಮಾನಸ ಉದ್ಘಾಟಿಸಲಿದ್ದು, ಅತಿಥಿಗಳಾಗಿ ಪಲ್ಲವ ವೆಂಕಟೇಶ, ಸುರೇಶ ಬಿಜಾಪುರ, ಎಸ್.ಎ. ಮುಲ್ಲಾ ಹಾಗೂ ಎಲ್.ಎಚ್. ಅರುಣಕುಮಾರ ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

'ಚಿತ್ರಕಲಾ ಪ್ರದರ್ಶನ ಮಳಿಗೆ'ಯನ್ನು ಶ್ಯಾಮಲಾ ಗುರುಪ್ರಸಾದ್ ಉದ್ಘಾಟಿಸಲಿದ್ದಾರೆ ಎಂದರು.

ಸಮ್ಮೇಳನದಲ್ಲಿ ದಿಕ್ಸೂಚಿ ಮಾತುಗಳನ್ನಾಡಲು ಬಿ.ಜಿ. ಕೋಳ್ಸೆ ಪಾಟೀಲ್ ಮುಂಬೈನಿಂದ ಆಗಮಿಸಲಿದ್ದು, ಜೊತೆಗೆ ವಿ. ಬಾಲಸುಬ್ರಮಣಿಯನ್ ಹಾಗೂ ಕೆ. ನೀಲಾ ಭಾಗವಹಿಸಲಿದ್ದಾರೆ ಎಂದರು.

ಹಕ್ಕೋತ್ತಾಯ ಮಂಡನೆ ಕಾರ್ಯಕ್ರಮದಲ್ಲಿ ಗುರುನಾಥ ಉಳ್ಳಿಕಾಶಿ ಹಾಗೂ ಮಹೇಶ ಪತ್ತಾರ ಮಾತನಾಡಲಿದ್ದಾರೆ ಎಂದು ತಿಳಿಸಿದರು.

ಸಮ್ಮೇಳನದಲ್ಲಿ ಹಲವಾರು ಸಮಕಾಲೀನ ವಿಷಯಗಳ ಕುರಿತು ವಿಸ್ತೃತ ಚರ್ಚೆ ನಡೆಯಲಿದ್ದು, ಗದಗ ಜಿಲ್ಲೆಯಿಂದ 1,500ಕ್ಕೂ ಹೆಚ್ಚು ಜನರು ಭಾಗವಹಿಸಲಿದ್ದಾರೆ. ಸಂವಿಧಾನ ಅಪಾಯದಲ್ಲಿರುವ ಹಿನ್ನೆಲೆಯಲ್ಲಿ ಅದರ ರಕ್ಷಣೆಗೆ ಜನಜಾಗೃತಿ ಮೂಡಿಸುವುದು ಅಗತ್ಯವಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಬಿ.ಕೆ. ಪೂಜಾರ, ನೂರುಂದಪ್ಪ ಕೋಳೂರು, ಸರೋಜಾ ಕೋಳೂರು, ಶರಣು ಪೂಜಾರ, ಪರಶು ಕಾಳೆ, ರಮೇಶ್ ಕೋಳೂರು, ಯೂಸೂಫ್ ಮಜ್ಜಗಿ, ಮಲ್ಲಪ್ಪ ಕೋಳೂರು ಉಪಸ್ಥಿತರಿದ್ದರು.

ರಹಿಮಾನ್ ಶಾವಲಿ ಉರುಸಿನ ಅಂಗವಾಗಿ ಶ್ರೀ ಕಟ್ಟಿಬಸವೇಶ್ವರ ನಾಟ್ಯ ಸಂಘದ ಅದ್ಭುತ ಪ್ರದರ್ಶನ

# ನಾಟ್ಯ ರಸಿಕರ ಮನಗೆದ್ದ "ಧರ್ಮದ ನುಡಿ ಬೆಂಕಿಯ ಕಿಡಿ"

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ರಹಿಮಾನ್ ಶಾವಲಿ ಉರುಸು ಅಂಗವಾಗಿ ಶ್ರೀ ಗಣೇಶ ದೇವಸ್ಥಾನದ ರಂಗಮಂಟಪದಲ್ಲಿ ಸೋಮವಾರ ರಾತ್ರಿ ಶ್ರೀ ಕಟ್ಟಿಬಸವೇಶ್ವರ ನಾಟ್ಯ ಸಂಘದ ಕಲಾವಿದರು ಅಭಿನಯಿಸಿದ "ಧರ್ಮದ ನುಡಿ ಬೆಂಕಿಯ ಕಿಡಿ" ನಾಟಕ ನಾಟ್ಯ ರಸಿಕರ ಮನಸೂರೆಗೊಳ್ಳುವಲ್ಲಿ ಸಂಪೂರ್ಣ ಯಶಸ್ವಿಯಾಯಿತು.



ಸಂಗೀತ, ಅಭಿನಯ, ನಿರ್ದೇಶನ ಹಾಗೂ ನೃತ್ಯ ಎಲ್ಲ ವಿಭಾಗಗಳಲ್ಲಿಯೂ ನಾಟಕ ಪ್ರೇಕ್ಷಕರ ಮೆಚ್ಚುಗೆಗೆ ಪಾತ್ರವಾಯಿತು. ಕಳೆದ ಎರಡು ತಿಂಗಳಿನಿಂದ ಸ್ಥಳೀಯ ಕಲಾವಿದರು ಪಟ್ಟಿದ್ದ ಶ್ರಮ ವೇದಿಕೆಯಲ್ಲಿ ಸಾರ್ಥಕಗೊಂಡಿತು. ವಿಶಾಲ ಬಯಲಿನಲ್ಲಿ ಸಹಸ್ರಾರು ಸಂಖ್ಯೆಯಲ್ಲಿ ನೆರೆದಿದ್ದ ಜನರು ನಾಟಕದ ಪ್ರತಿಯೊಂದು ಸನ್ನಿವೇಶವನ್ನೂ ಆಸ್ವಾದಿಸಿ ಕಲಾವಿದರಿಗೆ ಭರ್ಜರಿ ಚಪ್ಪಾಳೆ ತಟ್ಟಿದರು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಐಶ್ವರ್ಯ ನಾಗರಾಳ, ಗ್ರಾಮೀಣ ಭಾಗದಲ್ಲಿಯೇ ಇಂತಹ ಸಾಂಸ್ಕೃತಿಕ ಸೊಗಡನ್ನು ಕಾಣಲು ಸಾಧ್ಯ. ನಾಟಕಗಳು ಸಮಾಜ ತಿದ್ದುವಲ್ಲಿ ಪ್ರಮುಖ ಪಾತ್ರವಹಿಸುತ್ತವೆ. ಬಾಲ್ಯದಿಂದಲೇ ನನಗೆ ನಾಟಕಗಳೆಂದರೆ ಅಪಾರ ಅಭಿಮಾನ. ಹಿಂದೂ-ಮುಸ್ಲಿಂ ಭಾವೈಕ್ಯತೆಯ ಸಂದೇಶ ಸಾರುವ ಈ ನಾಟಕ ಯಶಸ್ವಿಯಾಗಲಿ ಎಂದು ಹಾರೈಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮಲ್ಲನಗೌಡ ಪಾಯಪ್ಪಗೌಡ್ರ ಮಾತನಾಡಿ, ನಮ್ಮ ಓಣಿಯ ಯುವಕರ ಉತ್ಸಾಹ ಹಿರಿಯರಿಗೆ ಸಂತಸ ತಂದಿದೆ. ಉರುಸಿನ ನಿಮಿತ್ಯ ನಾಟಕ ಪ್ರದರ್ಶಿಸುವುದಾಗಿ ತಿಳಿಸಿದಾಗ ನಮಗೆ ಹೆಮ್ಮೆಯಾಯಿತು. ಸಾಕಷ್ಟು ಪರಿಶ್ರಮದೊಂದಿಗೆ ಯುವಕರು ನಾಟಕ ಸಿದ್ಧಪಡಿಸಿದ್ದು, ಸಾರ್ವಜನಿಕರು ಪ್ರೋತ್ಸಾಹಿಸಬೇಕು ಎಂದರು.

ಉಮೇಶ ಸಂಗನಾಳಮಠ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಮಹಾದೇವಪ್ಪ ಬೇವಿನಕಟ್ಟಿ ಕಾರ್ಯಕ್ರಮ ನಿರೂಪಿಸಿದರು.

ನಾಟಕದ ಗುರುಗಳಾದ ಶಂಕರ ರೊಟ್ಟಿ ಪ್ರಾರಂಭದಿಂದ ಕೊನೆಯವರೆಗೂ ನಾಟಕವನ್ನು ಅಚ್ಚುಕಟ್ಟಾಗಿ ಮುನ್ನಡೆಸಿ ಪ್ರೇಕ್ಷಕರ ಮೆಚ್ಚುಗೆಗೆ ಪಾತ್ರರಾದರು.

ಈ ಸಂದರ್ಭದಲ್ಲಿ ಕಲ್ಮೇಶ ತೊಂಡಿಹಾಳ, ಶಂಕ್ರಣ್ಣ ದೊಡ್ಡಣ್ಣವರ, ಮುತ್ತಪ್ಪ ಮಾವಿನಕಾಯಿ, ಪರಪ್ಪ ಬೆಡಗಲ್ಲ, ಪ್ರಕಾಶ ಪಾಯಪ್ಪಗೌಡ್ರ, ಬಸವರಾಜ ಕಲಾಲಬಂಡಿ, ಉಮೇಶ ಕರಮುಡಿ, ಪ್ರಕಾಶ ಕೊತಬಾಳ, ವೀರಣ್ಣ ಗುಜಮಾಗಡಿ, ಫಕೀರಗೌಡ ಪಾಯಪ್ಪಗೌಡ್ರ, ಶಿವಣ್ಣ ಮುಗಳಿ, ಬಸವರಾಜ ಮಾಳವಾಡ, ಮಂಜುನಾಥ ಮಲ್ಲನಗೌಡ್ರ, ಅಡವಿ, ಅಶೋಕ ಬಾರಕೇರ, ಉಡಚಪ್ಪ ತಳವಾರ, ಮುತ್ತಪ್ಪ ಬಿಷ್ಟನಗೌಡ್ರ, ಶ್ರೀಕಾಂತ ಹೊಸಮನಿ ಹಾಗೂ ನಿವೃತ್ತ ಮುಖ್ಯ ಶಿಕ್ಷಕರಾದ ಅರುಣ ಕುಲಕರ್ಣಿ ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ದಾನಿಗಳನ್ನು ಸನ್ಮಾನಿಸಲಾಯಿತು.

"ನಾಟಕಗಳು ಸಮಾಜ ತಿದ್ದುವಲ್ಲಿ ಮಹತ್ವದ ಪಾತ್ರವಹಿಸುತ್ತವೆ. ಹಿಂದೂ-ಮುಸ್ಲಿಂ ಭಾವೈಕ್ಯತೆಯ ಸಂದೇಶ ಸಾರುವ ಈ ನಾಟಕ ಯಶಸ್ವಿಯಾಗಲಿ."

– ಐಶ್ವರ್ಯ ನಾಗರಾಳ, ಪಿಎಸ್ಐ

# ವಿವಿಧ ಹುದ್ದೆಗಳಿಗೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಅಧೀನದಲ್ಲಿ ಗದಗ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಜಿಲ್ಲಾ ವಿಕಲಚೇತನರ ಪುನರ್ವಸತಿ ಕೇಂದ್ರದಲ್ಲಿ ಖಾಲಿ ಇರುವ ವಿವಿಧ ತಾಂತ್ರಿಕ ಹಾಗೂ ವೈದ್ಯಕೀಯ ಹುದ್ದೆಗಳ ಭರ್ತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಒಟ್ಟು 5 ಹುದ್ದೆಗಳಿದ್ದು, ಕ್ಲಿನಿಕಲ್ ಸೈಕಾಲಜಿಸ್ಟ್ ಹುದ್ದೆಗೆ M.A. in Clinical Psychology, ಕೃತಕಾಂಗ ಜೋಡಣೆ (P & O) ಅಭಿಯಂತರ ಹುದ್ದೆಗೆ P & O Engineering Degree/ Diploma ಜೊತೆಗೆ 2ರಿಂದ 5 ವರ್ಷಗಳ ಅನುಭವ, ಸ್ಪೀಚ್ ಥೆರಪಿಸ್ಟ್ ಮತ್ತು ಆಡಿಯಾಲಜಿಸ್ಟ್ ಹುದ್ದೆಗೆ B.Sc in Speech & Audiology, ಮೊಬಿಲಿಟಿ ಇನ್‌ಸ್ಟ್ರಕ್ಟರ್ ಹುದ್ದೆಗೆ Certificate Course in O & ಒ ಹಾಗೂ ಇಯರ್ ಮೋಲ್ಡ್ ಟೆಕ್ನಿಷಿಯನ್ ಹುದ್ದೆಗೆ Certificate Course in Ear Mould Technology ವಿದ್ಯಾರ್ಹತೆ ಹೊಂದಿರಬೇಕು.

ಆಸಕ್ತ ಅಭ್ಯರ್ಥಿಗಳು ತಮ್ಮ ಲಿಖಿತ ಅರ್ಜಿಯೊಂದಿಗೆ ಅಂಕಪಟ್ಟಿಗಳ ದೃಢೀಕೃತ ನಕಲು ಪ್ರತಿಗಳನ್ನು ಲಗತ್ತಿಸಿ ಮೇ 30ರೊಳಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಜಿಲ್ಲಾ ಶಾಖೆ, ಕೆ.ಎಚ್. ಪಾಟೀಲ ಸ್ಟೇಡಿಯಂ ಎದುರು, ಗದಗ ಕಚೇರಿಯನ್ನು ಸಂಪರ್ಕಿಸಬಹುದು. ದೂರವಾಣಿ ಸಂಖ್ಯೆ: 08372-220559.

ಅರ್ಹ ಅಭ್ಯರ್ಥಿಗಳಿಗೆ ಸಂದರ್ಶನದ ಸ್ಥಳ ಹಾಗೂ ಸಮಯವನ್ನು ದೂರವಾಣಿ, ಎಸ್‌ಎಂಎಸ್ ಅಥವಾ ಕಚೇರಿಯ ನೋಟಿಸ್ ಬೋರ್ಡ್ ಮೂಲಕ ತಿಳಿಸಲಾಗುವುದು ಎಂದು ಸಂಸ್ಥೆಯ ಸಭಾಪತಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka